# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 217 | Volume - 02 Issue - 217
ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | RNI No: KARKAN/2023/88462
ಕೆಎ/ಎಸ್‌ಕೆ/ಸಿಟಿಎ–874/2024–2026 | KA/SK/CTA-874/2024-2026
ಚಿತ್ರದುರ್ಗ | Chitradurga
ದಿನಾಂಕ: 20–03–2025 ಗುರುವಾರ | Date: 20-03-2025 Thursday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು
ಮಂಡಿಪಕ್ಕ ರಸ್ತೆ ನಿರ್ಮಾಣ ಆಕ್ಷೇಪಣೆ: ಪರಿಶೀಲನೆ ನಡೆಸಿದ ಅಧಿಕಾರಿ ವರ್ಗ 2
ವ್ಯವಸ್ಥಿತ ಹಾಗೂ ಪ್ರಾಮಾಣಿಕವಾಗಿ ಕಾರ್ಮಿಕ ಸುಂಕ ಸಂಗ್ರಹಿಸಿ: ಜಿಪಂ ಸಿಇಓ 3
ಬದುಕಿನ ಯಶಸ್ಸೆಂದರೇ ಕೇವಲ ಹಣ ಗಳಿಕೆಯಲ್ಲ! 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹಾಡುಹಗಲೇ ಜೂಜಾಟ: 23,163 ಹಣವಶ: 6 ಜನರ ಮೇಲೆ ಮೊಕದ್ದಮೆ

» **ಚಳ್ಳಕೆರೆ**

ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟವಾಡುತ್ತಿದ್ದ ಗಾಂಧಿನಗರದ ಮಲ್ಲಿಕಾರ್ಜುನ ಇತರೆ ಐವರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 23.160ನ್ನು ವಶಪಡಿಸಿಕೊಂಡಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ, ಸಾರ್ವಜನಿಕರ ಮಾಹಿತಿ ಮೇರೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಮೇಲ್ಕಂಡ ಸ್ಥಳಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಹಾಡುಹಗಲೇ ಜೂಜಾಟದಲ್ಲಿ ತೊಡಗಿದ್ದ 6 ಜನರನ್ನು ವಶಕ್ಕೆ ಪಡೆದು ಅವರ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂದಿದ್ದಾರೆ.

### ಮಾದಿಗ ಸಮುದಾಯದ ಆಸ್ತಿ ರಕ್ಷಣೆಗಾಗಿ 24ರಂದು ಪ್ರತಿಭಟನೆ

» **ಚಳ್ಳಕೆರೆ**

ಚಳ್ಳಕೆರೆ ನಗರದಲ್ಲಿರುವ ಮಾದಿಗ ಸಮುದಾಯದ ಆಸ್ತಿ ರಕ್ಷಣೆಗಾಗಿ ಜಿಲ್ಲಾ ಮಾದಿಗ ಮಹಾಸಭಾ ಸಹಯೋಗದೊಂದಿಗೆ ತಾಲ್ಲೂಕು ಮಾದಿಗಮಹಾಸಭಾ ಸಹಯೋಗದಿಂದ ಮಾರ್ಚ್ 24ರ ಸೋಮವಾರ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಜಿಲ್ಲಾ ಮಾದಿಗ ಸಮುದಾಯದ ಅಧ್ಯಕ್ಷ ಎಂ.ಶಿವಮೂರ್ತಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಕಳೆದ ಹಲವಾರು ವರ್ಷಗಳಿಂದ ಚಳ್ಳಕೆರೆ ನಗರದಲ್ಲಿ ನಮ್ಮ ಸಮುದಾಯದ ಹಿರಿಯ ಮುಖಂಡರು ಚರ್ಮದ ಮಂಡಿಯೂ ಸೇರಿದಂತೆ ಕೆಲವೆಡೆ ಸಮುದಾಯದ ಆಸ್ತಿಯನ್ನು ಸಂರಕ್ಷಿಸಿದ್ದಾರೆ. ಆದರೆ, ಇತ್ತೀಚಿನ ದಿನಗಳಲ್ಲಿ ಈ ಆಸ್ತಿಯನ್ನು ಕಬಳಿಸುವ ಹುನ್ನಾರ ನಡೆದಿದ ಬಗ್ಗೆ 24ರಂದು ತಾಲ್ಲೂಕು ಕಚೇರಿ ಮುಂದೆ ಬೃಹತ್ ಪ್ರತಿಭಟನೆಯನ್ನುಹಮ್ಮಿಕೊಂಡಿದೆ.ಪ್ರತಿಭಟನೆಯಲ್ಲಿ ತಾಲ್ಲೂಕಿನ ಮಾದಿಗ ಸಮುದಾಯದ ಎಲ್ಲಾ ಸಂಘಟನೆಗಳು ಭಾಗವಹಿಸಿ ಬೆಂಬಲಿಸುವಂತೆ ಮನವಿ ಮಾಡಿದ್ದಾರೆ.

### ಅಧಾರ್ ನೊಂದಿಗೆ ಎಪಿಕ್ ಜೋಡಣೆಗೆ ಶೀಘ್ರ ಕ್ರಮ-ಜ್ಞಾನೇಶ್ ಕುಮಾರ್

» **ಚಿತ್ರದುರ್ಗ**

ಆಧಾರ್ ಕಾರ್ಡ್ ನೊಂದಿಗೆ ಎಪಿಕ್ (EPIC) ಸಂಖ್ಯೆಯನ್ನು ಕೂಡಲೇ ಜೋಡಣೆ (Link) ಮಾಡಲು ಕ್ರಮ ವಹಿಸಲಾಗುವುದು ಎಂದು ಭಾರತ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ತಿಳಿಸಿದ್ದಾರೆ. ಈ ಸಂಬಂಧ ನವದೆಹಲಿಯ ನಿರ್ವಚನ ಸದನದಲ್ಲಿ ಚುನಾವಣಾ ಭಾರತೀಯ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಚುನಾವಣಾ ಆಯುಕ್ತರಾದ ಡಾ. ಸುಖಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರು ಕೇಂದ್ರ ಗೃಹ ಕಾರ್ಯದರ್ಶಿ, ಕಾರ್ಯದರ್ಶಿ ಶಾಸಕಾಂಗ ಇಲಾಖೆ, ಕಾರ್ಯದರ್ಶಿ ಮೇಟಿ ಮತ್ತು ಯುಐಡಿಎಐ ಮುಖ್ಯ ಕಾರ್ಯ ನಿರ್ವಣಾಧಿಕಾರಿ ಮತ್ತು ಇಸಿಐನ ತಾಂತ್ರಿಕ ತಜ್ಞರೊಂದಿಗೆ ಇಂದು ಸಭೆ ನಡೆಸಿ ಚರ್ಚಿಸಿದರು. ಚುನಾವಣಾ ಆಯೋಗವು ಆರ್ಟಿಕಲ್ 326, ಆರ್‌ಪಿ ಆಕ್ಟ್, 1950 ಮತ್ತು ಸುಪ್ರೀಂ ಕೋರ್ಟ್ ತೀರ್ಪುಗಳ ಪ್ರಕಾರ ಕ್ರಮ ಕೈಗೊಳ್ಳುತ್ತದೆ. ಗಖಆಂಖ ಮತ್ತು ಇಅಖ ಯ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ. ಭಾರತದ ಸಂವಿಧಾನದ 326 ನೇ ವಿಧಿಯ ಪ್ರಕಾರ, ಮತದಾನದ ಹಕ್ಕನ್ನು ಭಾರತದ ನಾಗರಿಕರಿಗೆ ಮಾತ್ರ ನೀಡುವುದು, ಆಧಾರ್ ಕಾರ್ಡ್ ವ್ಯಕ್ತಿಯ ಗುರುತನ್ನು ಮಾತ್ರ ಸ್ಥಾಪಿಸುತ್ತದೆ. ಆದ್ದರಿಂದ, ಇಕಖಅ ಅನ್ನು ಆಧಾರ್‌ನೊಂದಿಗೆ ಲಿಂಕ್ ಮಾಡುವುದನ್ನು ಸಂವಿಧಾನದ 326 ನೇ ವಿಧಿ, 1950 ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 23(4), 23(5) ಮತ್ತು 23(6) ರ ನಿಬಂಧನೆಗಳ ಪ್ರಕಾರ ಕ್ರಮವಹಿಸಲಾಗುವುದು. ಅದರಂತೆ, ಯುಐಡಿಎಐ ಮತ್ತು ಇಸಿಐನ ತಾಂತ್ರಿಕ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ.

# ಭದ್ರಾ ಪೂರ್ಣಕ್ಕೆ ರು.10,000 ಕೋಟಿ ಹಣ ನೀಡಿ: ಟಿ.ರಘುಮೂರ್ತಿ ಬೇಡಿಕೆ

» **ನಮ್ಮಜನ ಸಮಾಚಾರ**

ಚಳ್ಳಕೆರೆ: ರಾಜ್ಯದ ಮದ್ಯ ಕರ್ನಾಟಕದ ನಾಲ್ಕು ಜಿಲ್ಲೆಗಳಾದ ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ತುಮಕೂರು ಜಿಲ್ಲೆ ವ್ಯಾಪ್ತಿಯಲ್ಲಿ ಭದ್ರಾಮೇಲ್ದಂಡೆ ಯೋಜನೆ ಮೂಲಕ ನೀರಾವರಿ ಸೌಲಭ್ಯ ಕಲ್ಪಿಸುವ ಕುರಿತು ವಿಧಾನಸೌದದಲ್ಲಿ ನಡೆದ ಬಜೆಟ್ ಅಧಿವೇಶನದಲ್ಲಿ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಭದ್ರಾಮೇಲ್ದಂಡೆ ಯೋಜನೆ ಪೂರ್ಣಗೊಳಿಸಲು ಅಗತ್ಯವಿರುವ ಹಣವನ್ನು ಬಿಡುಗಡೆಗೊಳಿಸುವಂತೆ ಮುಖ್ಯಮಂತ್ರಿಗಳನ್ನು ಆಗ್ರಹಿಸಿದರು.

ಬುಧವಾರ ನಡೆದ ಅಧಿವೇಶನದಲ್ಲಿ ಪಾಲ್ಗೊಂಡ ಮಾತನಾಡಿದ ಅವರು, ಕೇಂದ್ರ ಸರ್ಕಾರ 2023–4ನೇ ಸಾಲಿನ ಆಯವ್ಯಯದಲ್ಲಿ ಭದ್ರಾಮೇಲ್ದಂಡೆಯೋಜನೆಗೆ 5300 ಕೋಟಿ ಹಣ ನೀಡುವ ಪ್ರಸ್ತಾಪನೆ ಮಾಡಿದ್ದು ಇದುವರೆಗೂ ಹಣ ನೀಡಿಲ್ಲ. 2025–26ನೇಸಾಲಿನ ಆಯವ್ಯಯದಲ್ಲಿ 2600ಕೋಟಿ ಹಣನೀಡುವ ಭರವಸೆ ನೀಡಿದ್ದಾರೆ.

ಒಟ್ಟಾರೆಯಾಗಿ ಯೋಜನೆಗೆ 21500ಕೋಟಿ ಹಣ ಬೇಕಿದ್ದು, ಈಗಾಗಲೇ 10500 ಕೋಟಿ ವೆಚ್ಚವಾಗಿದೆ. ಇನ್ನೂ 10 ಸಾವಿರ ಕೋಟಿ ಹಣ ಬೇಕಿದ್ದು ಮುಖ್ಯಮಂತ್ರಿಗಳು 2611 ಕೋಟಿ ನೀಡಿ ಕೇಂದ್ರ ಸರ್ಕಾರ 5300ಕೋಟಿ ನೀಡಿದರೆ ಯೋಜನೆ ಪೂರ್ಣಗೊಳ್ಳಲು ಅವಶ್ಯವಿರುವ 5 ಸಾವಿರ ಕೋಟಿ ಹಣವನ್ನು ರಾಜ್ಯಸರ್ಕಾರ ನೀಡಿ ಯೋಜನೆ ಪೂರ್ಣಗೊಳಿಸಲು ಸಹಕಾರ ನೀಡಬೇಕು.

ಒಟ್ಟು 29.9 ಟಿಎಂಸಿ ನೀರು ಲಭ್ಯವಿದ್ದು, 21.9 ಟಿಎಂಸಿ ನೀರಿನಲ್ಲಿ ಹನಿನೀರಾವರಿ 2.25 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ, 6 ಟಿಎಂಸಿ ನೀರು 767 ಕೆರೆ ತುಂಬಿಸಲು, ವಾಣಿವಿಲಾಸಸಾಗರಕ್ಕೆ 2 ಟಿಎಂಸಿ ನೀರು ಸಿಗಲಿದೆ.

ಆದರೆ,ಈ ಯೋಜನೆಗೆ ಸಕಾಲದಲ್ಲಿ ಹಣ ನೀಡದ ಹಿನ್ನೆಲೆಯಲ್ಲಿ ಭದ್ರಾಮೇಲ್ದಂಡೆ ಯೋಜನೆ ಕಾರ್ಯಗತವಾಗುವುದೇ ಎಂಬ ಅನುಮಾನ ಜನರದ್ದಾಗಿದೆ.

ಕಳೆದ ಹಲವಾರು ದಶಕಗಳಿಂದ ಜನರಿಗೆ ಆಳಿದ ಎಲ್ಲಾ ಸರ್ಕಾರಗಳು ಭರವಸೆ ನೀಡುತ್ತಾ ಬಂದಿವೆ. ರಾಜ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ 2028 ರೊಳಗೆ ಈ ಯೋಜನೆ ಪೂರ್ಣಗೊಳಿಸುವ ಭರವಸೆ ನೀಡಿದ್ದರು. ಆದ್ದರಿಂದ ಮುಖ್ಯಮಂತ್ರಿಗಳು ಈ ಯೋಜನೆಗೆ ಅಗತ್ಯವಿರುವ 10 ಸಾವಿರ ಕೋಟಿಹಣವನ್ನು ಬಿಡುಗಡೆಗೊಳಿಸಿ ಜನರ ವಿಶ್ವಾಸಕ್ಕೆ ಪಾತ್ರರಾಗಬೇಕೆಂದು ಮನವಿ ಮಾಡಿದರು.

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ಶಾಸಕರಾಗಿ ಮೂರನೇ ಬಾರಿಗೆ ಆಯ್ಕೆಯಾದ ಟಿ.ರಘುಮೂರ್ತಿ ಪ್ರತಿ ಅಧಿವೇಶನದಲ್ಲೂ ಚಳ್ಳಕೆರೆ ಕ್ಷೇತ್ರದ ಅಭಿವೃದ್ದಿಗೆ ಸಂಬಂಧಪಟ್ಟಂತೆ ಹಲವಾರು ಬಾರಿ ಪ್ರಶ್ನಿಸಿ ಸರ್ಕಾರದಿಂದ ಸೂಕ್ತ ಉತ್ತರ ಪಡೆದಿದ್ದಾರೆ. ಇವರ ಕೋರಿಕೆಯಂತೆ ಕೆಲವೊಂದು ಯೋಜನೆಗೆ ಮಾತ್ರ ಸರ್ಕಾರ ಅನುದಾನ ನೀಡಿದೆ. ಇನ್ನೂ ಹಲವಾರು ಯೋಜನೆಗೆ ಅನುದಾನ ನೀಡಬೇಕಿದೆ, ರಘುಮೂರ್ತಿಯವರು ಸದನದಲ್ಲಿ ಪ್ರಸ್ತಾಪಿಸಿದಂತೆ ಸರ್ಕಾರ ಹಣ ನೀಡಿದರೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಸರ್ವತೋಮುಖ ಅಭಿವೃದ್ದಿಗೆ ಇನ್ನೂ ಹೆಚ್ಚು ಶಕ್ತಿಬರಲಿದೆ ಎಂದು ಸಾರ್ವಜನಿಕರ ಅಭಿಪ್ರಾಯವಾಗಿದೆ.






> ಮಧ್ಯ ಕರ್ನಾಟಕದ ಜನರ ಕನಸಾಗಿರುವ ಭದ್ರಾ ಯೋಜನೆ ಪೂರ್ಣಕ್ಕೆ ನಮ್ಮ ಮುಖ್ಯಮಂತ್ರಿಗಳಿಂದ 10 ಸಾವಿರ ಕೋಟಿ ಹಣಕ್ಕೆ ಬೇಡಿಕೆ ಇಟ್ಟಿದ್ದೇನೆ. 2028 ಭದ್ರಾ ಯೋಜನೆ ಪೂರ್ಣಗೊಳಲು ಈಗ ನೀಡಿರುವ 2611 ಕೋಟಿ ಜೊತೆಗೆ ಇದೇ ವರ್ಷದಲ್ಲಿ 5 ಸಾವಿರ ಕೋಟಿ ಹಣ ನೀಡುವಂತೆ ಸರ್ಕಾರಕ್ಕೆ ಒತ್ತಾಯಿಸಿದ್ದು ರಾಜ್ಯದ ಸಂಸದರು ಸಹ ಪಕ್ಷಾತೀತವಾಗಿ ಭದ್ರಾ ಯೋಜನೆಯ ಹಣ ತರಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಿ.
>
> » **ಟಿ.ರಘುಮೂರ್ತಿ ಶಾಸಕರು ಚಳ್ಳಕೆರೆ ವಿಧಾನ ಸಭಾ ಕ್ಷೇತ್ರ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ**

## ಪ್ರತ್ಯೇಕ ದಾವಣಗೆರೆ–ಚಿತ್ರದುರ್ಗ ಮೆಗಾ ಡೈರಿ ಆರಂಭಿಸಿ

» **ದಾವಣಗೆರೆ**

ಕ್ಷೇತ್ರದ ವ್ಯಾಪ್ತಿಯ ಕಲ್ಪನಹಳ್ಳಿ ಬಳಿ ಪ್ರತ್ಯೇಕ ದಾವಣಗೆರೆ–ಚಿತ್ರದುರ್ಗ ಮೆಗಾ ಡೈರಿ ಸ್ಥಾಪಿಸಲು ಭೂಮಿ ಖರೀದಿಸಿದ್ದು, ಈ ಬಗ್ಗೆ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. ಕೂಡಲೇ ಅನುದಾನ ಬಿಡುಗಡೆ ಮಾಡಬೇಕೆಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಒತ್ತಾಯಿಸಿದರು.ವಿಧಾನಸಭೆಯಲ್ಲಿ ಬುಧವಾರ ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಶಿವಮೊಗ್ಗ ಹಾಲು ಒಕ್ಕೂಟದಿಂದ ಬೇರ್ಪಡಿಸಿ ಪ್ರತ್ಯೇಕ ದಾವಣಗೆರೆ–ಚಿತ್ರದುರ್ಗ ಒಳಗೊಂಡ ಮೆಗಾ ಡೈರಿ ಆರಂಭಿಸಲು ನನ್ನ ಕ್ಷೇತ್ರದ ವ್ಯಾಪ್ತಿಯ ಕಲ್ಪನಹಳ್ಳಿಯಲ್ಲಿ ಭೂಮಿ ಖರೀದಿಸಿದ್ದೇವೆ.



ಸರ್ಕಾರ ಕೂಡಲೇ ಅನುದಾನ ಬಿಡುಗಡೆ ಮಾಡಿ ಡೈರಿ ಆರಂಭಿಸಿದರೆ ಈ ಭಾಗದ ರೈತರು ಆರ್ಥಿಕವಾಗಿ ಸಬಲರಾಗಲಿದ್ದಾರೆ ಎಂದು ಸದನದ ಗಮನ ಸೆಳೆದರು.

ಹೈನುಗಾರಿಕೆಯಲ್ಲಿ ಮಹಿಳೆಯರಿಗೆ ಶೇ.50ರಷ್ಟು ಸಬ್ಸಿಡಿ ಕೊಡುವುದನ್ನು ಶೇ.75ರಷ್ಟು ಹೆಚ್ಚಳ ಮಾಡಿದರೆ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಯಾಗಿ ಉತ್ತಮ ಬದುಕು ಕಟ್ಟಿಕೊಳ್ಳುತ್ತಾರೆ. ಈ ಬಗ್ಗೆ ಸರ್ಕಾರ ಗಮನ ಹರಿಸಬೇಕೆಂದರು.

ಮಧ್ಯ ಕರ್ನಾಟಕದ ಕೇಂದ್ರ ಬಿಂದು, ಹಿಂದುಳಿದ ಜಿಲ್ಲೆ ದಾವಣಗೆರೆ. ಅದರಲ್ಲೂ ಅತೀ ಹಿಂದುಳಿದ ಮೀಸಲು ಕ್ಷೇತ್ರ ಮಾಯಕೊಂಡ.


ಪುಟ 2


## ದೇವಪುರ ಗ್ರಾಪಂ ಉಪಾಧ್ಯಕ್ಷರಾಗಿ ರಾಜು ತಳವಾರ್ ಆಯ್ಕೆ



**ಹೊಸದುರ್ಗ:**ತಾಲೋಕಿನ ದೇವಪುರ ಗ್ರಾಮ ಪಂಚಾಯ್ತಿ ಉಪಾಧ್ಯಕ್ಷರ ರಾಜೀನಾಮೆಯಿಂದ ತೆರವಾಗಿದ್ದ ಸಾಮಾನ್ಯ ಸ್ಥಾನಕ್ಕೆ ಇಂದು ನಡೆದ ಉಪ ಚುನಾವಣೆಯಲ್ಲಿ ಹೊನ್ನೇನಹಳ್ಳಿ ಗ್ರಾಮದ ಬಸವರಾಜಪ್ಪ ಟಿ (ರಾಜು ತಳವಾರ್ )ಅವಿರೋದವಾಗಿ ಆಯ್ಕೆಯಾದರು 19 ಜನ ಸದಸ್ಯರು ಒಳಗೊಂಡ ಪಂಚಾಯ್ತಿ ಸರ್ವ ಸದಸ್ಯರು ಒಪ್ಪಿಗೆ ಸೂಚಿಸುವ ಮೂಲಕ ಉಪಾಧ್ಯಕ್ಷರ ಸ್ಥಾನಕ್ಕೆ ಆಯ್ಕೆ ಮಾಡಿದರು.

**ಪ್ರಮುಖ ಸುದ್ದಿ**

### ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ್ ಸಿದ್ದೇಶ್ ಹೇಳಿಕೆ

# ಶಿಷ್ಟಾಚಾರ ಅನುಸಾರ ಜಯಂತಿಗಳ ಆಚರಣೆ

» **ಚಿತ್ರದುರ್ಗ**

ಸರ್ಕಾರ ನಿರ್ದೇಶನ ಹಾಗೂ ಶಿಷ್ಟಾಚಾರ ಅನುಸಾರ ಮುಂಬರುವ ಜಯಂತಿಗಳನ್ನು ಆಚರಣೆ ಮಾಡುವುದಾಗಿ ಜಿಲ್ಲಾಧಿಕಾರಿ ಕಚೇರಿ ತಹಶೀಲ್ದಾರ್ ಸಿದ್ದೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಅಗ್ನಿಬನ್ನಿರಾಯ, ದೇವರ ದೇಸಿಮಯ್ಯ ಹಾಗೂ ಭಗವಾನ್ ಮಹಾವೀರ ಜಯಂತಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾರ್ಚ್ 28 ರಂದು ಶ್ರೀ ಅಗ್ನಿಬನ್ನಿರಾಯ, ಏಪ್ರಿಲ್ 02 ರಂದು ಶ್ರೀ ಆದ್ಯ ವಚನಕಾರ ದೇವರ ದಾಸಿಮಯ್ಯ ಹಾಗೂ ಏಪ್ರಿಲ್ 10 ರಂದು ಭಗವಾನ್ ಮಹಾವೀರ ಜಯಂತಿಗಳನ್ನು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗುವುದು. ಸಂಬಂದಪಟ್ಟ ಜಯಂತಿಗಳಂದು ಸಂಪನ್ಮೂಲ ವ್ಯಕ್ತಿಗಳನ್ನು ಆಹ್ವಾನಿಸಿ ಮಹನೀಯರ ಕೊಡುಗೆಗಳ ಕುರಿತು ಉಪನ್ಯಾಸ ಏರ್ಪಡಿಸಲಾಗುವುದು. ಸಮುದಾಯದ ಮುಖಂಡರು ಸಂಪನ್ಮೂಲ ವ್ಯಕಿಗಳ ಹೆಸರು ಸೂಚಿಸಬಹುದು. ಶಿಷ್ಟಾಚಾರ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ ಎಲ್ಲಾ ಜನಪ್ರತಿನಿಧಿಗಳನ್ನು ಜಯಂತಿ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಂಗೀತ ಕಾರ್ಯಕ್ರಮವಿರಲಿದೆ. ತಪ್ಪದೇ ಸಾರ್ವಜನಿಕರು ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ತಹಶೀಲ್ದಾರ್ ಸಿದ್ದೇಶ್ ಹೇಳಿದರು.

ಜಿಲ್ಲಾ ನೇಕಾರ ಸಮುದಾಯ ಅಧ್ಯಕ್ಷ ಗೋವಿಂದಪ್ಪ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವು ದೇವರ ದಾಸಿಮಯ್ಯನವರ ಜಯಂತಿ ಆಚರಣೆಗೆ ಜಿಲ್ಲಾಡಳಿತದೊಂದಿಗೆ ನೇಕಾರ ಸಮುದಾಯ ಕೈ ಜೋಡಿಸಲಿದೆ. ಅರ್ಥಪೂರ್ಣವಾಗಿ ಜಯಂತಿ ಕಾರ್ಯಕ್ರಮ ಆಯೋಜಿಸುವಂತೆ ಕೋರಿದರು.ಚಿತ್ರದುರ್ಗ ಜೈನ ಸಮುದಾಯದ ಅಧ್ಯಕ್ಷ ವಸ್ತಿಮಲ್ ಮಾತನಾಡಿಮಹಾವೀರಜಯಂತಿಯಂದು ಭಗವಾನ್ ಮಹಾವೀರ ಭಾಚಿತ್ರವನ್ನು ನಗರ ಹಳೆಯ ಜೈನ್ ದೇವಾಲಯಂದಿಂದ ಹೊಸ ಜೈನ್ ದೇವಾಲಯದವರೆಗೆ ಮೆರವಣಿಗೆ ಮಾಡಲಾಗುವುದು. ನಗರಸಭೆ ವತಿಯಿಂದ ಅಲಂಕೃತ ಟ್ರಾಕ್ಟರ್ ಒದಗಿಸುವಂತೆ ಕೋರಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ್ ಮಾತನಾಡಿ, ಸಮುದಾಯ ಮುಖಂಡರು ಸೂಚಿಸುವ ಜಿಲ್ಲಾ ಅಧ್ಯಕ್ಷರ ಹೆಸರನ್ನು ಆಹ್ವಾನ ಪತ್ರಿಕೆ ಮುದ್ರಿಸಲಾಗುವುದು. ಜಯಂತಿ ಮೆರವಣಿಗೆಯ ಕಲಾ ತಂಡಗಳನ್ನು ವೆಚ್ಚವನ್ನು ಪೂರೈಸಲು ನಿಯಮಗಳಲ್ಲಿ ಅವಕಾಶವಿಲ್ಲ. ಉಪನ್ಯಾಸ ನೀಡುವ ಸಂಪನ್ಮೂಲ ವ್ಯಕ್ತಿಗಳಿಗೆ ಗೌರವ ಧನ ನೀಡುವುದಾಗಿ ಹೇಳಿದರು. ಸಭೆಯಲ್ಲಿ ಜಿಲ್ಲಾ ನೇಕಾರ ಸಮುದಾಯದ ಗೋವಿಂದಪ್ಪ, ಶ್ರೀನಿವಾಸ, ರಘು, ಸವಿತಾ, ಶಿವರುದ್ರಮ್ಮ, ಜೈನ ಸಮುದಾಯದ ಮುಖಂಡರಾದ ಪ್ರೇಮಚಂದ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



## ಫಾಸ್ಟ್ ನ್ಯೂಸ್

### ಪ್ರತ್ಯೇಕ ದಾವಣಗೆರೆ-ಚಿತ್ರದುರ್ಗ ಮೆಗಾ ಡೈರಿ ಆರಂಭಿಸಿ: ಶಾಸಕ

ಸಿರಿಗೆರೆ ತರಳಬಾಳು ಜಗದ್ಗುರುಗಳ ಹೋರಾಟದ ಫಲವಾಗಿ ನನ್ನ ಕ್ಷೇತ್ರದಲ್ಲಿ 22 ಕೆರೆಗಳ ಯೋಜನೆ ಜಾರಿಗೊಂಡು ಎಲ್ ಅಂಡ್ ಟಿ ಕಂಪನಿ ಕಾಮಗಾರಿ ನಡೆಸಿತ್ತು. ಕಳಪೆ ಕಾಮಗಾರಿಯಿಂದ 100 ಹಳ್ಳಿಗಳಿಗೆ ಕುಡಿಯುವ ನೀರು, ನೀರಾವರಿ ಕಲ್ಪಿಸಬೇಕೆಂಬ ಉದ್ದೇಶ ಈಡೇರಿಲ್ಲ. ಪುನಃ ಹೊಸ ಪೈಪ್‌ಲೈನ್ ಕಾಮಗಾರಿಗೆ ಹಣ ನೀಡಿ ಕಾಮಗಾರಿ ಆರಂಭಿಸುವಂತೆ ಈಗಾಗಲೇ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಾಗಿತ್ತು. ಕೂಡಲೇ ಸರ್ಕಾರ ಅನುದಾನ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.

ನನ್ನ ಕ್ಷೇತ್ರದಲ್ಲಿ ಹೆಚ್ಚು ಗುಡ್ಡಗಾಡು ಪ್ರದೇಶ ಹೊಂದಿದ್ದು, ಈ ಪ್ರದೇಶಗಳಲ್ಲಿ ಅತೀ ಹೆಚ್ಚು ಕೆರೆಗಳನ್ನು ನಿರ್ಮಾಣ ಮಾಡಿದರೆ ಜನಜಾನುವಾರುಗಳಿಗೆ ಕುಡಿಯುವ ನೀರು, ಅಂತರ್ಜಲ ಮಟ್ಟ ವೃದ್ಧಿಗೆ ಅನುಕೂಲವಾಗುತ್ತದೆ. ಅಲ್ಲದೇ ಬ್ರಿಟಿಷರು ನಿರ್ಮಿಸಿದ ಕೆರೆ ಇದೆ. ಅದನ್ನು ಜೀರ್ಣೋದ್ಧಾರ ಮಾಡಿದರೆ ಇಡೀ ಪಕ್ಷಿ ಸಂಕುಲ, ಹಳ್ಳಿಗಳಿಗೆ ಕುಡಿಯುವ ನೀರು ಒದಗಿಸಬಹುದು ಎಂದು ಸದನ ಗಮನ ಸೆಳೆದರು. ಎಸ್ಸಿ-ಎಸ್ಟಿ ಅಭಿವೃದ್ಧಿ ನಿಗಮಗಳಿಗೆ ಅನೇಕ ಸೌಲಭ್ಯ ಒದಗಿಸಲು ಅನುದಾನದ ಕೊರತೆ ಇದೆ. ಹೆಚ್ಚಿನ ಅನುದಾನ ನೀಡಬೇಕು. ಎಸ್ಸಿ-ಎಸ್ಟಿ ಸಮುದಾಯ ಆರ್ಥಿಕವಾಗಿ ಸಬಲರಾಗಲು ಭೂಒಡೆತನ ಯೋಜನೆ ಜಾರಿಗೊಳಿಸಿದ್ದು, ಕ್ಷೇತ್ರಕ್ಕೆ ಕೇವಲ ಒಂದೇ ಕೊಟ್ಟರೆ ಸಾಧ್ಯವಾಗುವುದಿಲ್ಲ. ಇದಕ್ಕೆ ಹೆಚ್ಚು ಒತ್ತು ಕೊಡಬೇಕು. ಖಾಸಗಿ ಕಾಲೇಜುಗಳಲ್ಲಿ ಡಿಪ್ಲೊಮಾ, ನರ್ಸಿಂಗ್, ಪ್ಯಾರಾ ಮೆಡಿಕಲ್ ಸೇರಿದಂತೆ ವೃತ್ತಿಪರ ಕೋರ್ಸ್‌ನಲ್ಲಿ ಅಭ್ಯಾಸ ಮಾಡುವ ಎಸ್ಸಿ-ಎಸ್ಟಿ ಮಕ್ಕಳಿಗೆ 2013-18ರಲ್ಲಿ ಹಾಸ್ಟೆಲ್ ಸೌಲಭ್ಯ ಇತ್ತು, ಈಗ ಇಲ್ಲ. ಕೂಡಲೇ ಈ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಒದಗಿಸಬೇಕೆಂದು ಆಗ್ರಹಿಸಿದರು.

**ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ:** ಮಳೆಗಾಲದಲ್ಲಿ ತುಂಗಾ ಜಲಾಯಶದಿಂದ ಭದ್ರಾ ಜಲಾಶಯಕ್ಕೆ ನೀರು ತುಂಬಿಸಿ ಅಪರ್ ಭದ್ರಾ ಯೋಜನೆ ನೀರು ನೀಡುವ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಿದರೆ ಭದ್ರಾ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯ ರೈತರಿಗೆ ಅನುಕೂಲವಾಗಲಿದೆ. ಇಲ್ಲದಿದ್ದರೆ, ನಮ್ಮ ಭಾಗದ ರೈತರಿಗೆ ಅನಾನುಕೂಲವಾಗಲಿದೆ. ಕೂಡಲೇ ಸರ್ಕಾರ ಈ ಯೋಜನೆಯ ಕಾಮಗಾರಿ ಪೂರ್ಣಗೊಳಿಸಬೇಕು. ರಾಗಿ, ಭತ್ತ, ತೊಗರಿ ಬೆಂಬಲ ಬೆಲೆಯಡಿ ಖರೀದಿಸಿದಂತೆ ಮೆಕ್ಕೆಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸಬೇಕೆಂದು ಶಾಸಕ ಕೆ.ಎಸ್.ಬಸವಂತಪ್ಪ ಒತ್ತಾಯಿಸಿದರು.

### ಎಸ್.ಕೆ.ಹಳ್ಳಿ: ಸಿರಿಧಾನ್ಯ ಬೇಸಾಯ ತರಬೇತಿ



» **ಹೊಸದುರ್ಗ**
ತಾಲೂಕಿನ ಮಾಡದಕೆರೆ ವಲಯದ ಎಸ್ ಕೆ ಹಳ್ಳಿ ಕಾರ್ಯಕ್ಷೇತ್ರದಲ್ಲಿ ಸಿರಿಧಾನ್ಯ ಬೇಸಾಯದ ಬಗ್ಗೆ ತರಬೇತಿಯನ್ನು ಹಮ್ಮಿಕೊಂಡಿದ್ದು ಸಂಪನ್ಮೂಲ ವ್ಯಕ್ತಿಯಾದ ಸುಮತಿ ಅವರು ಸಿರಿಧಾನ್ಯಗಳ ಪರಿಚಯ, ಸಿರಿಧಾನ್ಯಗಳ ಬೇಸಾಯದ ಬಗ್ಗೆ, ಸಿರಿಧಾನ್ಯ ಉಪಯೋಗಗಳ ಬಗ್ಗೆ ಹಾಗೂ ಹೈನುಗಾರಿಕೆಯ ಬಗ್ಗೆ ಸ್ವ ಉದ್ಯೋಗದ ಬಗ್ಗೆ ಸ್ವ ವಿಸ್ತಾರವಾಗಿ ಮಾಹಿತಿ ಹಾಗು ಮಾರ್ಗದರ್ಶನ ನೀಡಿದರು. ಯೋಜನಾಧಿಕಾರಿ ಚಂದ್ರಶೇಖರ್ ಅವರು ಯೋಜನೆಯ ಹಲವಾರು ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು. ತರಬೇತಿಯಲ್ಲಿ ಸ್ವಸಹಾಯ ಸಂಘದ ಸದಸ್ಯರು ಊರಿನ ಮುಖಂಡರು ಸೇವಾ ಪ್ರತಿನಿಧಿಯು ಹಾಗೂ ಕೃಷಿ ಮೇಲ್ವಿಚಾರಕರು ಉಪಸ್ಥಿತರಿದ್ದರು

### ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

» **ದಾವಣಗೆರೆ**
ಪ್ರತಿ ಜಿಲ್ಲೆಯಲ್ಲಿ ಪ್ರತಿ ತಿಂಗಳ 27 ರಂದು ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆಯ ಅಗತ್ಯಗಳನ್ನು ಪೂರೈಸುವ ಇಪಿಎಫ್‌ಒ (ನೌಕರರ ಭವಿಷ್ಯ ನಿಧಿ ಸಂಸ್ಥೆ), ಜಿಲ್ಲೆಗಳಲ್ಲಿ ಹೆಜ್ಜೆ ಗುರುತು ಮತ್ತು ಉಪಸ್ಥಿತಿಯನ್ನು ಹೆಚ್ಚಿಸುವ ಉದ್ದೇಶದಿಂದ ಮತ್ತು ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸಲಾಗುತ್ತದೆ. ದಾವಣಗೆರೆ ಜಿಲ್ಲೆಯಲ್ಲಿ ನಿಧಿ ಆಪ್ಕೆ ನಿಕಟ್ 2.0 ಕಾರ್ಯಕ್ರಮವು ಎಂ.ಕೆ.ಈ.ಟಿ.ಎಲ್.ಕೆ ಆಂಗ್ಲ ಮಾಧ್ಯಮ ಸಿಬಿಎಸ್‌ಸಿ ವಿದ್ಯಾಲಯ, ಹರಪನಹಳ್ಳಿ ರಸ್ತೆ ಹರಿಹರ ದಾವಣಗೆರೆ-577601, ಇಲ್ಲಿ ಮಾರ್ಚ್ 27 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ, ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ 4 ಗಂಟೆಯವರೆಗೆ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

### ವಿಶ್ವ ಗ್ರಾಹಕರ ದಿನಾಚರಣೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ಸಲಹೆ

# ಆನ್‌ಲೈನ್ ವಹಿವಾಟು: ಎಚ್ಚರಿಕೆಯಿಂದ ನಡೆಸಿ




» **ಚಿತ್ರದುರ್ಗ**
ಆನ್‌ಲೈನ್ ವಹಿವಾಟು ಹೊಸ ಪೀಳಿಗೆಯ ಮಾರುಕಟ್ಟೆಯಾಗಿದ್ದು, ಆನ್‌ಲೈನ್ ಮಾರುಕಟ್ಟೆಯಲ್ಲಿ ವಹಿವಾಟು ನಡೆಸುವಾಗ ಬಹಳ ಎಚ್ಚರಿಕೆಯಿಂದ ವ್ಯವಹಾರ ನಡೆಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಕಾನೂನು ಮಾಪನಾ ಶಾಸ್ತ್ರ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ "ವಿಶ್ವ ಗ್ರಾಹಕರ ದಿನಾಚರಣೆ" ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಂದು ವಸ್ತುಗಳು ಸಹ ಆನ್‌ಲೈನ್‌ನಲ್ಲಿ ಲಭ್ಯವಿದ್ದು, ಎಲ್ಲ ಕ್ಷೇತ್ರಗಳಲ್ಲಿಯೂ ಕೂಡ ಆನ್‌ಲೈನ್ ಮಾರುಕಟ್ಟೆ ಮೂಲಕ ಸೇವೆ ಒದಗಿಸಲಾಗುತ್ತಿದೆ. ಆದಾಗ್ಯೂ ಕೂಡ ನಮಗೆ ಆನ್‌ಲೈನ್ ಮಾರುಕಟ್ಟೆ ಕುರಿತು ಅರಿವಿನ ಕೊರತೆ ಇದೆ. ಹಾಗಾಗಿ ಪ್ರಸ್ತುತ ಸಂದರ್ಭದಲ್ಲಿ ಆನ್‌ಲೈನ್ ಮಾರುಕಟ್ಟೆ, ಆನ್‌ಲೈನ್ ಸೇವೆಗಳು ಬಹಳ ಅತ್ಯವಶ್ಯಕವಾಗಿದ್ದು, ಈ ಕುರಿತು ನಾವು ಹೆಚ್ಚಿನ ಅರಿವು ಪಡೆಯುವ ಅವಶ್ಯಕತೆ ಇದೆ ಎಂದು ಹೇಳಿದರು.

ವಿಶ್ವ ಗ್ರಾಹಕರ ದಿನಾಚರಣೆಯ ಈ ವರ್ಷದ ಘೋಷವಾಕ್ಯ "ಸುಸ್ಥಿರ ಜೀವನ ಶೈಲಿಗೆ ಸರಳ ಪರಿವರ್ತನೆ" ಎಂಬುದಾಗಿದೆ. ಮನುಷ್ಯನ ಅವಶ್ಯಕತೆಗಳಿಗೆ ಅನುಗುಣವಾಗಿ ಈ ಕಾಲಕ್ಕೆ ಬದಲಾವಣೆ ತರುವುದು ಹಾಗೂ ಮನುಷ್ಯನ ಒಳಿತಿಗಾಗಿ ಮಾಡಿಕೊಂಡ ಸೇವೆಗಳು ಪರಿಸರಕ್ಕೆ ಬಹಳಷ್ಟು ಹಾನಿಕಾರ ಮಾಡಬಾರದು ಎಂಬ ಪರಿಕಲ್ಪನೆಯಿಂದ ಈ ಘೋಷವಾಕ್ಯ ರೂಪಿಸಲಾಗಿದೆ. ಪ್ರತಿಯೊಬ್ಬರು ಸಹ ಆನ್‌ಲೈನ್ ಮಾರುಕಟ್ಟೆ ಬಳಸುತ್ತಿದ್ದಾರೆ. ವಿಶ್ವದ ಯಾವುದೇ ಮೂಲೆಯಲ್ಲಿರುವ ವಸ್ತುವನ್ನು ಖರೀದಿ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ ಅವರು, ಗ್ರಾಹಕರು ಎಚ್ಚರಿಕೆಯಿಂದ ಖರೀದಿ ಮಾಡಬೇಕು ಎಂದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಅಧ್ಯಕ್ಷೆ ಹೆಚ್.ಎನ್.ಮೀನಾ ಮಾತನಾಡಿ, ಗ್ರಾಹಕರ ರಕ್ಷಣಾ ಕಾಯ್ದೆಯನ್ನು ಮೊಟ್ಟ ಮೊದಲ ಬಾರಿಗೆ ಅಮೇರಿಕಾದಲ್ಲಿ ಜಾರಿಗೆ ಬಂದಿದ್ದು, ಅಂದು ಅಧ್ಯಕ್ಷರಾಗಿದ್ದ ಜಾನ್ ಎಫ್ ಕೆನಡಿ ಅವರು ಅಮೇರಿಕಾದಲ್ಲಿ ಗ್ರಾಹಕರಿಗೆ ಆಗುತ್ತಿರುವ ಮೋಸ, ವಂಚನೆ, ಅನ್ಯಾಯದ ವ್ಯಾಪಾರ, ಸೇವಾ ನ್ಯೂನತೆ ಅರಿತು ಗ್ರಾಹಕರ ಹಿತ ರಕ್ಷಣಾ ಕಾಯ್ದೆಯನ್ನು 1962ರಲ್ಲಿ ತಂದರು. ನಮ್ಮ ದೇಶದಲ್ಲಿ ಪ್ರತ್ಯೇಕವಾಗಿ ಕಾಯ್ದೆ ಇರಲಿಲ್ಲ. ಗ್ರಾಹಕರಿಗೆ ಆದ ಮೋಸ, ವಂಚನೆ, ಅನ್ಯಾಯ, ಅಪಘಾತಗಳ ಪರಿಹಾರಕ್ಕಾಗಿ ಕಂಪನಿ ಆಕ್ಟ್ 1956ರ ಕೆಳಗಡೆ ದೂರು ದಾಖಲಿಸಿ, ಪರಿಹಾರ ಪಡೆಯುವುದು ತುಂಬಾ ಕಷ್ಟವಾಗುತ್ತಿತ್ತು. ಮತ್ತು ಕೆಲವೊಮ್ಮೆ ಈ ಪರಿಹಾರ ಪಡೆದುಕೊಳ್ಳುವಲ್ಲಿ ವಂಚಿತರಾಗುತ್ತಿದ್ದರು. ಇದನ್ನು ಮನಗಂಡು ನಮ್ಮ ದೇಶದಲ್ಲಿ 1986ರಲ್ಲಿ ಗ್ರಾಹಕರ ಕಾಯ್ದೆ ಜಾರಿಗೆ ಬಂದಿತು. ಗ್ರಾಹಕರು ತಮಗೆ ಅನ್ಯಾಯವದಾಗ, ಮೋಸವಾದಾಗ, ಗ್ರಾಹಕ ವ್ಯವಹಾರಗಳ ಆಯೋಗಕ್ಕೆ ಅರ್ಜಿ ಸಲ್ಲಿಸಿ, ಪರಿಹಾರ ಹಾಗೂ ನ್ಯಾಯ ಪಡೆಯಬಹುದು ಎಂದು ತಿಳಿಸಿದರು.

ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಕೆ.ಪಿ.ಮಧುಸೂದನ್ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಸಂಪ್ರಾದಾಯಿಕ ವ್ಯವಹಾರ ಪದ್ಧತಿ ಸಂಪೂರ್ಣ ಕಣ್ಮರೆಯಾಗಿದ್ದು, ಆನ್‌ಲೈನ್ ಬದಲಾದ ಪದ್ಧತಿಗೆ ಬಂದಿದ್ದೇವೆ. ಈ ಒಂದು ಹೊಸ ವ್ಯವಸ್ಥೆಯಲ್ಲಿ ಸಾಕಷ್ಟು ಮೋಸಗಳು, ಅನ್ಯಾಯಗಳು ಆಗುತ್ತಿರುವುದನ್ನು ನಾವು ಕಾಣುತ್ತಿದ್ದೇವೆ. ಈ ಹಿನ್ನಲೆಯಲ್ಲಿ ಗ್ರಾಹಕರ ದಿನಾಚರಣೆ ಆಚರಿಸುವ ಮೂಲಕ ಗ್ರಾಹಕರಿಗೆ ಅರಿವು, ತಿಳುವಳಿಕೆ ನೀಡುವ ಜತೆಗೆ ಗ್ರಾಹಕರು ತಮ್ಮ ಹಕ್ಕುಗಳನ್ನು ಯಾವ ರೀತಿಯಾಗಿ ರಕ್ಷಣೆ ಮಾಡಬೇಕು ಎಂಬುವುದರ ಕುರಿತು ಮನವರಿಕೆ ಮಾಡಿಕೊಡಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಅವರು ಮಾತನಾಡಿ, ಇಂದು ಅಂಗೈಯಲ್ಲೇ ಅಂಗಡಿಯಿದೆ. ಅಂದರೆ ಅಂಗೈಯಲ್ಲಿರುವ ಮೊಬೈಲೇ ಅಂಗಡಿಯಾಗಿದ್ದು, ಪ್ರತಿಯೊಂದು ವಸ್ತುಗಳನ್ನು ಆನ್‌ಲೈನ್‌ನಲ್ಲಿಯೇ ಖರೀದಿಸಲು ಅವಕಾಶವಿದೆ. ಆದರೆ ಈ ರೀತಿ ಖರೀದಿಸುವಾಗ ಎಚ್ಚರಿಕೆವಹಿಸಬೇಕು. ಮೋಸವಾಗಿದೆ ಅಥವಾ ಅನ್ಯಾಯವಾಗಿದೆ ಎನಿಸಿದಲ್ಲಿ, ನ್ಯಾಯ ಪಡೆಯುವುದು ಪ್ರತಿಯೊಬ್ಬ ಗ್ರಾಹಕರ ಹಕ್ಕು. ಇದು ಸುಲಭವಾಗಿ ದೊರೆಯದಿದ್ದಲ್ಲಿ, ಗ್ರಾಹಕ ವ್ಯವಹಾರಗಳ ಆಯೋಗ ಅಂತಹವರಿಗೆ ನ್ಯಾಯ ಒದಗಿಸಿಕೊಡಲಿದೆ ಎಂದರು.

ಸೈಬರ್ ಠಾಣದಲ್ಲಿ ಗ್ರಾಹಕರ ಸುರಕ್ಷತೆ ಎಂಬ ವಿಷಯದ ಕುರಿತು ಸಿ.ಇ.ಎನ್.ಪೊಲೀಸ್ ಸ್ಟೇಷನ್‌ನ ಯಶೋಧ ಅವರು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಮಹಬೂಬ್ ಜಿಲಾನಿ ಖುರೇಷಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಕಾನೂನು ಮಾಪಾನ ಶಾಸ್ತ್ರ ಇಲಾಖೆಯ ಹಿರಿಯ ನಿರೀಕ್ಷಕ ರಾಗ್ಯಾ ನಾಯ್ಕ್, ಆಹಾರ ಸುರಕ್ಷತಾಧಿಕಾರಿಗಳಾದ ತಿರುಮಲೇಶ್, ನಾಗೇಶ್, ಕೆನರಾ ಬ್ಯಾಂಕ್ ಆರ್ಥಿಕ ಸಲಹೆಗಾರ ತಿಪ್ಪೇಸ್ವಾಮಿ, ಭಾರತೀಯ ಮಾನಕ ಬ್ಯುರೋ ಸಂಪನ್ಮೂಲ ವ್ಯಕ್ತಿ ಸುರೇಶ್ ರಾವ್ ಇದ್ದರು.

## ಪರಶುರಾಂಪುರ: ಎಸ್ಸೆಸ್ಸೆಲ್ಸಿ ಪರೀಕ್ಷಾ ಕೇಂದ್ರದಲ್ಲಿ ಸಿದ್ಧತೆ





» **ಪರಶುರಾಂಪುರ**
ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಗ್ರಾಮದ ಎರಡು ಕೇಂದ್ರಗಳಾದ ಕೆಪಿಎಸ್ ಶಾಲೆ ಹಾಗೂ ಸರ್ವೋದಯ ಸ್ಕೂಲ್‌ನಲ್ಲಿ ಪರೀಕ್ಷೆಗೆ ಸಕಲ ಸಿದ್ಧತೆ ಕೈಗೊಳ್ಳಲಾಗಿದ್ದು ಒಟ್ಟು 457 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. 21ರಿಂದ ಏಪ್ರಿಲ್ 4ರ ವರೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.15ರ ವರೆಗೆ ಪರೀಕ್ಷೆ ನಡೆಯಲಿದೆ.

ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿಯುವ ನೀರು, ವಿದ್ಯುತ್, ಶೌಚಾಲಯ, ಪರೀಕ್ಷೆ ಬರೆಯಲು ಡೆಸ್ಕ್ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳ ರೋಲ್ ನಂಬರ್ ಹಾಕುವ ಪ್ರಕ್ರಿಯೆ ಹಂತದಲ್ಲಿದ್ದೂ, ಕೆಪಿಎಸ್ ಶಾಲೆಯ ಪರೀಕ್ಷಾ ಕೇಂದ್ರದಲ್ಲಿ ಬಾಲಕರು 121, ಬಾಲಕಿಯರು 127 ಹಾಗೂ ಸರ್ವೋದಯ ಸ್ಕೂಲ್‌ನಲ್ಲಿ ಬಾಲಕರು 117, ಬಾಲಕಿಯರು 92, ಒಟ್ಟು 457 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ ಎಂದು ಮುಖ್ಯ ಅಧೀಕ್ಷಕರಾದ ಪಾತಲಿಂಗಪ್ಪ ಮತ್ತು ಹನುಮಂತರಾಯಪ್ಪ ಮಾಹಿತಿ ನೀಡಿದರು.

ಎರಡು ಪರೀಕ್ಷೆ ಕೇಂದ್ರಗಳಲ್ಲಿ ಕೆಪಿಎಸ್, ಸರ್ವೋದಯ, ವೇದಾವತಿ, ವಿಶ್ವಭಾರತಿ, ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆ, ಸಿದ್ದೇಶ್ವರನದುರ್ಗ, ಪಿ.ಮಹದೇವಪುರ, ಪಗಡಲಬಂಡೆ, ಕೋರ್ಲಕುಂಟೆ ಶಾಲೆಯ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಇದರಲ್ಲಿ ರೆಗ್ಯುಲರ್, ರಿಪಿಟರ್ ಸೇರಿದಂತೆ ಖಾಸಗಿ ನೋಂದಾಯಿಸಿದ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಪ್ರತಿ ಪರೀಕ್ಷಾ ಕೊಠಡಿಗಳಿಗೆ ಈಗಾಗಲೇ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಪ್ರತಿ ಕೇಂದ್ರಗಳ ವೆಬ್ ಕಾಸ್ಟಿಂಗ್ ಮಾಡಲಾಗಿದೆ. ಎಲ್ಲ ಕೇಂದ್ರಗಳಿಗೂ ಭದ್ರತಾ ದೃಷ್ಟಿಯಿಂದ ಪೊಲೀಸ್ ಸಿಬ್ಬಂದಿ ಹಾಗೂ ವೈದ್ಯಕೀಯ ಸಿಬ್ಬಂದಿಗಳನ್ನು ನೇಮಿಸಲಾಗಿದೆ ಎಂದು ಬಿಇಒ ಕೆ.ಎಸ್ ಸುರೇಶ್ ತಿಳಿಸಿದರು.

ಪರೀಕ್ಷೆ ಕೇಂದ್ರದಿಂದ 200 ಮೀಟರ್ ವರೆಗೂ ಪರೀಕ್ಷೆಯ ನಡೆಯುವ ದಿನಾಂಕದಲ್ಲಿ 144 ಸೆಕ್ಷನ್ ಜಾರಿಯಲ್ಲಿ ಇರುವುದರಿಂದ ಪರೀಕ್ಷೆ ಬರೆಯುವ ಅಭ್ಯರ್ಥಿಗಳು ಮತ್ತು ಸಿಬ್ಬಂದಿ ಹೊರತು ಪಡಿಸಿ ಬೇರೆ ಯಾರಿಗೂ ಪ್ರವೇಶವಿರುದಿಲ್ಲ.

ನಿಷೇಧಿತ ವಲಯದಲ್ಲಿ ಯಾವುದೇ ರೀತಿಯಲ್ಲಿ ಪರೀಕ್ಷೆಯಲ್ಲಿ ನಕಲು ಮಾಡಲು ಸಹಾಯ ಮಾಡುವುದು, ಚೀಟಿ ಅಥವಾ ಇನ್ನಿತರ ರೀತಿಯಲ್ಲಿ ಉತ್ತರಗಳನ್ನು ಬರೆದು ಹಂಚುವುದು ಅಥವಾ ಇನ್ನಾವುದೇ ವಸ್ತುಗಳನ್ನು ಹಂಚುವುದು/ರವಾನಿಸುವುದು ಇತ್ಯಾದಿ ಚಟುವಟಿಕೆಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ.

ಪರೀಕ್ಷಾ ದಿನದಂದು ಪರೀಕ್ಷೆ ಮುಕ್ತಾಯವಾಗುವವರೆಗೆ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ಮತ್ತು ಸಮೀಪದಲ್ಲಿರುವ ಜೆರಾಕ್ಸ್ ಮತ್ತು ಕಂಪ್ಯೂಟರ್/ಸೈಬರ್ ಅಂಗಡಿಗಳು ಪರೀಕ್ಷೆ ನಡೆಯುವ ದಿನದಂದು ಕಾರ್ಯನಿರ್ವಹಿಸುವುದನ್ನು ನಿಷೇಧಿಸಲಾಗಿದೆ.

## ಚರ್ಮದ ಮಂಡಿಪಕ್ಕ ರಸ್ತೆ ನಿರ್ಮಾಣ ಆಕ್ಷೇಪಣೆ: ಪರಿಶೀಲನೆ ನಡೆಸಿದ ಅಧಿಕಾರಿ ವರ್ಗ



» **ಚಳ್ಳಕೆರೆ**
ಇಲ್ಲಿನ ಗಾಂಧಿನಗರದಲ್ಲಿರುವ ಚರ್ಮದ ಮಂಡಿಪ್ರದೇಶಕ್ಕೆ ತಹಶೀಲ್ದಾರ್ ರೇಹಾನ್‌ಪಾಷ, ಪೌರಾಯುಕ್ತ ಎಚ್.ಜಿ.ಜಗರೆಡ್ಡಿ, ತಾಲ್ಲೂಕು ಸರ್ವೆಯರ್ ಬಾಬುರೆಡ್ಡಿ, ಸಹಾಯಕ ಕಾರ್ಯಪಾಲಕ ಅಭಿಯಂತರ ಕೆ.ವಿನಯ್, ಪ್ರಭಾರೆ ಅಧ್ಯಕ್ಷೆ ಸುಮಭರಮಣ್ಣ ಮತ್ತು ಇತರೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಚರ್ಮದ ಮಂಡಿ ಪಕ್ಕದಲ್ಲಿಯೇ ರಸ್ತೆ ನಿರ್ಮಾಣವಾಗುತ್ತಿರುವ ಬಗ್ಗೆ ಆಕ್ಷೇಪಣೆ ವ್ಯಕ್ತವಾದ ಹಿನ್ನೆಲೆಯಲ್ಲಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಸರ್ವೆಯರ್ ಬಾಬುರೆಡ್ಡಿ ಮತ್ತು ಸಿಬ್ಬಂದಿ ವರ್ಗ ಅಳತೆ ಮಾಡಿದರು. ಈ ಸಂದರ್ಭದಲ್ಲಿ ಚರ್ಮದ ಮಂಡಿ ಹೋರಾಟ ಸಮಿತಿಯವರು ಯಾರೂ ಇಲ್ಲದ ಕಾರಣ ಮತ್ತೊಮ್ಮೆ ಸರ್ವೆ ನಡೆಸಿ ನಿರ್ಧಾರ ಕೈಗೊಳ್ಳುವಂತೆ ತಹಶೀಲ್ದಾರ್ ರೇಹಾನ್‌ಪಾಷ ಸೂಚಿಸಿದರು.

ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ಸಿ.ಶ್ರೀನಿವಾಸ್, ನಾಗಮಣಿ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಕಾಂಗ್ರೆಸ್ ಮುಖಂಡ ಭರಮಣ್ಣ, ಆರೋಗ್ಯ ನಿರೀಕ್ಷಕಿ ಗೀತಾಕುಮಾರಿ, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮಲೆಕ್ಕಾಧಿಕಾರಿಪ್ರಕಾಶ್ ಮುಂತಾದವರು ಇದ್ದರು.

## ಪ್ರಮುಖ ಸುದ್ದಿ

### ಜಿಲ್ಲೆಯಲ್ಲಿ 24,416 ವಿದ್ಯಾರ್ಥಿಗಳು, 82 ಪರೀಕ್ಷಾ ಕೇಂದ್ರಗಳು

# ಮಾ.21ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪ್ರಾರಂಭ


» **ಚಿತ್ರದುರ್ಗ**
ಪ್ರಸಕ್ತ ಶೈಕ್ಷಣಿಕ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ಮಾರ್ಚ್ 21 ರಿಂದ ಪ್ರಾರಂಭಗೊಂಡು, ಏಪ್ರಿಲ್ 04 ರವರೆಗೆ ಜರುಗಲಿವೆ. ಜಿಲ್ಲೆಯ 24,416 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲಿದ್ದು, ಇದಕ್ಕಾಗಿ 82 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ.

ಮಾ. 21 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಪ್ರಾರಂಭವಾಗಲಿದ್ದು, ಪರೀಕ್ಷೆಯನ್ನು ಸುಗಮವಾಗಿ ಜರುಗಿಸಲು ಅನುಕೂಲವಾಗುವಂತೆ 82 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಒಟ್ಟು 24,416 ವಿದ್ಯಾರ್ಥಿಗಳು ಈ ಬಾರಿ ಪರೀಕ್ಷೆ ಬರೆಯಲಿದ್ದು, ಪರೀಕ್ಷಾ ದಿನಗಳಂದು ಪ್ರಶ್ನೆಪತ್ರಿಕೆಗಳನ್ನು ಕೇಂದ್ರಗಳಿಗೆ ಸಾಗಿಸುವ ಸಲುವಾಗಿ ಈಗಾಗಲೆ ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ.

ಚಳ್ಳಕೆರೆ ತಾಲ್ಲೂಕಿನಲ್ಲಿ 20 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿದ್ದು, 5472 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 22 ಪರೀಕ್ಷಾ ಕೇಂದ್ರಗಳಿದ್ದು, 6,635 ವಿದ್ಯಾರ್ಥಿಗಳು. ಹಿರಿಯೂರು ತಾಲ್ಲೂಕಿನಲ್ಲಿ 13 ಪರೀಕ್ಷಾ ಕೇಂದ್ರಗಳಿದ್ದು, 3,677 ವಿದ್ಯಾರ್ಥಿಗಳು. ಹೊಳಲ್ಕೆರೆ ತಾಲ್ಲೂಕಿನಲ್ಲಿ 08 ಪರೀಕ್ಷಾ ಕೇಂದ್ರಗಳಿದ್ದು, 2,854 ವಿದ್ಯಾರ್ಥಿಗಳು. ಹೊಸದುರ್ಗ ತಾಲ್ಲೂಕಿನಲ್ಲಿ 11 ಪರೀಕ್ಷಾ ಕೇಂದ್ರಗಳಿದ್ದು, 3,195 ವಿದ್ಯಾರ್ಥಿಗಳು ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿ 08 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿದ್ದು, ಇಲ್ಲಿ 2,583 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಯ ಪಾವಿತ್ರತೆ ಕಾಪಾಡಲು ಚಿತ್ರದುರ್ಗ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಕೇಂದ್ರೀಕೃತ ವೀಕ್ಷಣಾ ಘಟಕವನ್ನು ಸ್ಥಪಿಸಿದ್ದು, ಒಟ್ಟು 24 ಅಧಿಕಾರಿ, ಸಿಬ್ಬಂದಿಗಳನ್ನು ಒಳಗೊಂಡ ನೋಡಲ್ ಅಧಿಕಾರಿಗಳು ಮತ್ತು ವೀಕ್ಷಕರ ತಂಡ ರಚಿಸಲಾಗಿದೆ. ಇದರ ಜೊತೆಗೆ ತಾಂತ್ರಿಕ ಸಹಾಯಕರನ್ನು ಕೂಡ ನಿಯೋಜಿಸಲಾಗಿದೆ. ಜಿ.ಪಂ. ಸಿಇಒ ಅವರು ಕೇಂದ್ರೀಕೃತ ವೀಕ್ಷಣಾ ಘಟಕಕ್ಕೆ ಉಸ್ತುವಾರಿ ಅಧಿಕಾರಿಗಳನ್ನು ನೇಮಕ ಮಾಡಿರುತ್ತಾರೆ. ಒಟ್ಟು 82 ಪರೀಕ್ಷಾ ಕೇಂದ್ರಗಳಲ್ಲಿನ 1135 ಕೊಠಡಿಗಳಿಗೆ ವೆಬ್‌ಕಾಸ್ಟಿಂಗ್‌ಗಾಗಿ ಸಿಸಿಟಿವಿ ಅಳವಡಿಸಲಾಗಿರುತ್ತದೆ. ಈ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆ ವಿತರಿಸಲು ಹಾಗೂ ಉತ್ತರ ಪತ್ರಿಕೆಗಳನ್ನು ಹಿಂಪಡೆದು ಸಂಬಂಧಪಟ್ಟ ಹಂತಕ್ಕೆ ತಲುಪಿಸಲು 35 ಮಾರ್ಗಾಧಿಕಾರಿಗಳನ್ನು ಈಗಾಗಲೆ ನೇಮಕ ಮಾಡಿಕೊಳ್ಳಲಾಗಿದ್ದು, ಈ ತಂಡಕ್ಕೆ ಸಶಸ್ತ್ರ ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜಿಸಲು ಕ್ರಮ ಕೈಗೊಳ್ಳಲಾಗಿದೆ.

ಪರೀಕ್ಷಾ ಕೇಂದ್ರಗಳಲ್ಲಿ ಮುಂಜಾಗ್ರತಾ ಕ್ರಮವಾಗಿ ಆರೋಗ್ಯ ಇಲಾಖೆಯ ಸಿಬ್ಬಂದಿ, ತಜ್ಞರನ್ನು ಪ್ರಥಮ ಚಿಕಿತ್ಸಾ ವ್ಯವಸ್ಥೆಯೊಂದಿಗೆ ನಿಯೋಜಿಸಲು ಅಗತ್ಯ ಕ್ರಮ ವಹಿಸಲಾಗಿದೆ. ಪರೀಕ್ಷಾ ಪಾವಿತ್ರ್ಯತೆ ಕಾಪಾಡಲು ಹಾಗೂ ಪರೀಕ್ಷಾ ಸುರಕ್ಷತಾ ಹಿತದೃಷ್ಟಿಯಿಂದ ಜಿಲ್ಲೆಯ ಎಲ್ಲ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿಯಲ್ಲಿ ಪರೀಕ್ಷಾ ಅವಧಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದು, ನಿಷೇಧಿತ ಪ್ರದೇಶವೆಂದು ಘೋಷಣೆ ಮಾಡಲಾಗಿದೆ. ಪರೀಕ್ಷಾ ಸಮಯಗಳಲ್ಲಿ ವಿದ್ಯುತ್ ಅಡಚಣೆಯಾಗದಂತೆ ನೋಡಿಕೊಳ್ಳಲು ಬೆಸ್ಕಾಂ ಕಾರ್ಯಪಾಲಕ ಅಭಿಯಂತರರಿಗೆ ನಿರ್ದೇಶನ ನೀಡಲಾಗಿದೆ.

ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಜಿಲ್ಲೆಯಲ್ಲಿ ಸುಗಮವಾಗಿ ಹಾಗೂ ವ್ಯವಸ್ಥಿತ ರೀತಿಯಲ್ಲಿ ಗೊಂದಲಕ್ಕೆ ಅವಕಾಶವಾಗದಂತೆ ಕೈಗೊಳ್ಳಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಸಿಸಿ ಟಿವಿ, ವೆಬ್‌ಕಾಸ್ಟಿಂಗ್ ಸೇರಿದಂತೆ ಅನ್ಯ ವಿಷಯಗಳ ಬಗ್ಗೆ ಅನಗತ್ಯ ಆಲೋಚನೆ ಮಾಡದೆ, ಅಭ್ಯಾಸದ ಕಡೆ, ಉತ್ತಮ ರೀತಿಯಲ್ಲಿ ಪರೀಕ್ಷೆ ಬರೆಯುವತ್ತ ತಮ್ಮ ಗಮನ ಕೇಂದ್ರೀಕರಿಸಬೇಕು. ಯಾವುದೇ ಊಹಾಪೋಹ ಹಾಗೂ ವದಂತಿಗಳಿಗೆ ಕಿವಿಗೊಡದೆ, ಆತ್ಮವಿಶ್ವಾಸದಿಂದ ಪರೀಕ್ಷೆ ಬರೆದು, ಜಿಲ್ಲೆಗೆ ಉತ್ತಮ ಫಲಿತಾಂಶ ತರಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಮನವಿ ಮಾಡಿದ್ದಾರೆ.



**ಪರೀಕ್ಷಾ ವೇಳಾಪಟ್ಟಿ**
ಮಾ. 21 ರಂದು ಪ್ರಥಮ ಭಾಷೆ. ಮಾ. 24 ರಂದು ಗಣಿತ, ಮಾ. 26 ರಂದು ಇಂಗ್ಲೀಷ್, ಮಾ. 29 ರಂದು ಸಮಾಜ ವಿಜ್ಞಾನ, ಏಪ್ರಿಲ್ 02 ರಂದು ವಿಜ್ಞಾನ ಹಾಗೂ ಏಪ್ರಿಲ್ 04 ರಂದು ಹಿಂದಿ + ಎನ್‌ಎಸ್‌ಕ್ಯೂಎಫ್ ವಿಷಯಗಳಿಗೆ ಪರೀಕ್ಷೆ ನಡೆಯಲಿದೆ. ಪರೀಕ್ಷೆ ಬೆಳಿಗ್ಗೆ 10 ರಿಂದ ಪ್ರಾರಂಭವಾಗಲಿದೆ.

## ಫಾಸ್ಟ್ ನ್ಯೂಸ್

### ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳ ಕುರಿತು 3 ದಿನಗಳ ಕಮ್ಮಟ: ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆ ಇವರ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು ಎಂಬ ಹೆಸರಿನಲ್ಲಿ 3 ದಿನಗಳ ಕಮ್ಮಟವನ್ನು 2025ರ ಏಪ್ರಿಲ್ 21, 22 ಮತ್ತು 23ರಂದು ಹಾವೇರಿ ಜಿಲ್ಲೆಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿಯಲ್ಲಿ ನಡೆಸಲು ಉದ್ದೇಶಿಸಿದ್ದು, ಈ ಕುರಿತು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 45 ವರ್ಷ ವಯಸ್ಸುಳ್ಳ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಏಪ್ರಿಲ್ 05 ಕೊನೆಯ ದಿನವಾಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ http://karnatakasahithyaacademy.org ನ ಮೂಲಕ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಎನ್.ಕರಿಯಪ್ಪ ತಿಳಿಸಿದ್ದಾರೆ.

### ಮಾ.21ರಂದು ವಿಶ್ವ ಜಲದಿನದ ಅಂಗವಾಗಿ ಪರಿಸರ ಜಾಥಾ




» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ, ನೆಹರು ಯುವ ಕೇಂದ್ರ ಹಾಗೂ ನಗರಸಭೆ ಸಹಯೋಗದಲ್ಲಿ ವಿಶ್ವ ಜಲ ದಿನ–2025ರ ಕಾರ್ಯಕ್ರಮದ ಅಂಗವಾಗಿ ಇದೇ ಮಾರ್ಚ್ 21ರಂದು ಬೆಳಿಗ್ಗೆ 8.30ಕ್ಕೆ ನಗರದ ಗಾಂಧಿ ವೃತ್ತ ಸಮೀಪದ ನೀಲಕಂಠೇಶ್ವರ ದೇವಸ್ಥಾನದಿಂದ ಒನಕೆ ಓಬವ್ವ ವೃತ್ತದವರೆಗೆ ಪರಿಸರ ಜಾಥಾ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಉದ್ಘಾಟಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಎಸ್‌ಪಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕರ್ನಾಟಕ ಕೆರೆ ಸಂರಕ್ಷಣಾ ಮತ್ತು ಅಭಿವೃದ್ಧಿ ಪ್ರಾಧಿಕಾರದ ಜಿಲ್ಲಾ ಕಾರ್ಯನಿರ್ವಹಣಾಧಿಕಾರಿ ಡಿ.ಜಿ.ವೆಂಕಟರಾಮ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ವೆಂಕಟೇಶ್, ಡಿಡಿಪಿಐ ಎಂ.ಆರ್.ಮಂಜುನಾಥ್, ಕಾರ್ಮಿಕ ಅಧಿಕಾರಿ ಅನಿಲ್ ಬಿ ಬಗಟಿ, ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಡಾ.ಎಂ.ಜೆ.ಮಹೇಶ್, ಬಾಲ ಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಜಿಲ್ಲಾ ಅಂತರ್ಜಲ ಕಚೇರಿ ಹಿರಿಯ ಭೂವಿಜ್ಞಾನಿ ವಿ.ಬಸಂತ್, ಪೌರಾಯುಕ್ತೆ ಎಂ.ರೇಣುಕಾ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಭಾಗವಹಿಸುವರು ಎಂದು ಪರಿಸರ ಅಧಿಕಾರಿಗಳು ತಿಳಿಸಿದ್ದಾರೆ.

### ಮಾಸಿಕ ಗಮಕ ಸಂಭ್ರಮ-20

» ಚಿತ್ರದುರ್ಗ

ಚಿತ್ರದುರ್ಗ ನಗರದ ಗಮಕ ಕಲಾಭಿಮಾನಿಗಳ ಸಂಘವು ನಡೆಸುತ್ತಿರುವ ಮಾಸಿಕ ಗಮಕ ವಾಚನ–ವ್ಯಾಖ್ಯಾನ ಸಂಭ್ರಮದ 20ನೇ ಕಾರ್ಯಕ್ರಮವು ಇದೇ ತಿಂಗಳ 22/3/2025, ಶನಿವಾರ ಸಂಜೆ 6 ಗಂಟೆಗೆ ನಗರದ ಜೆ.ಸಿ.ಆರ್ ಬಡಾವಣೆಯ ಶ್ರೀ ಗಣಪತಿ ದೇವಾಲಯದ ಆವರಣದಲ್ಲಿ ನಡೆಯಲಿದೆ. ಈ ಸಂದರ್ಭದಲ್ಲಿ 'ಕುಮಾರ ವ್ಯಾಸ ಭಾರತದ ಉದ್ಯೋಗ ಪರ್ವದ ವಿಶ್ವರೂಪ ದರ್ಶನ ಕಥಾ ಪ್ರಸಂಗ'ವನ್ನು ಅಧ್ಯಾಪಕರಾದ ಬೆಂಗಳೂರಿನ ಶ್ರೀಮತಿ ಸುಮಾ ಜಯಸಿಂಹ ವಾಚನ ಮಾಡಲಿದ್ದು, ಬೆಂಗಳೂರಿನ ಇಸ್ರೋದ ವಿಜ್ಞಾನಿಗಳಾದ ಜಯಸಿಂಹ ಇವರು ವ್ಯಾಖ್ಯಾನ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕಲಾ ಪೋಷಕರಾದ ಶ್ರೀಕಾಂತ್ ಭಾಗವಹಿಸಲಿದ್ದಾರೆ. ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಲೆ, ಕಲಾವಿದರನ್ನು ಪ್ರೋತ್ಸಾಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಗಮಕ ಕಲಾಭಿಮಾನಿಗಳ ಸಂಘ ಹಾಗೂ ಜೆ.ಸಿ.ಆರ್. ಗಣಪತಿ ದೇವಾಲಯ ಸಮಿತಿಯವರು ಕೋರಿದ್ದಾರೆ.

### ಜಿಲ್ಲಾಮಟ್ಟದ ಸುಂಕ ಸಂಗ್ರಹಣಾ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಪ್ರಾಮಾಣಿಕವಾಗಿ ಕಾರ್ಮಿಕ ಸುಂಕ ಸಂಗ್ರಹಿಸಿ

» ಚಿತ್ರದುರ್ಗ



ಕಟ್ಟಡ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವ್ಯವಸ್ಥಿತವಾಗಿ ಹಾಗೂ ಪ್ರಾಮಾಣಿಕವಾಗಿ ಕಾರ್ಮಿಕ ಸುಂಕ ಸಂಗ್ರಹಿಸಲು ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಮಟ್ಟದ ಸುಂಕ ಸಂಗ್ರಹಣಾ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996ರ ಅಡಿಯಲ್ಲಿ ರಚಿಸಲಾಗಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸಿ ಅವರಿಗೆ ಹಲವು ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಮಾಡುತ್ತಿದೆ. ಮಂಡಳಿಗೆ ಸಂಪನ್ಮೂಲ ಕ್ರೂಢೀಕರಿಸುವ ಸಲುವಾಗಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳುವ ಮಾಲೀಕರು, ನಿಯೋಜಕರಿಂದ ಒಟ್ಟು ನಿರ್ಮಾಣ ವೆಚ್ಚದ ಶೇ.1ರಷ್ಟು ಸುಂಕ ಸಂಗ್ರಹ ಮಾಡಬೇಕು ಎಂದು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ರೂ.10 ಲಕ್ಷ ನಿರ್ಮಾಣ ವೆಚ್ಚ ಮೀರಿದ ವಾಸದ ಮನೆ ಹಾಗೂ ಯಾವುದೇ ವಾಣಿಜ್ಯ ಕಟ್ಟಡ ನಿರ್ಮಾಣ ಕಾಮಗಾರಿಗಳ ಶೇ.1ರಷ್ಟು ಸುಂಕವನ್ನು ವ್ಯವಸ್ಥಿತವಾಗಿ ಸಂಗ್ರಹಿಸಬೇಕು. ಇದರಿಂದ ಕಾರ್ಮಿಕರ ಕಲ್ಯಾಣ ಮಂಡಳಿಗೆ ಆದಾಯ ಬರಲಿದೆ ಎಂದು ತಿಳಿಸಿದ ಅವರು, ಇಂಜಿನಿಯರಿಂಗ್ ವಿಭಾಗಗಳಲ್ಲಿ ಸಮರ್ಪಕವಾಗಿ ಅನುಷ್ಠಾನವಾಗಬೇಕು ಎಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಅಧಿಕಾರಿಗಳಿಗೆ ಸೂಚನೆ ನೀಡಿದರು.


ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಕಟ್ಟಡ ಕಾಮಗಾರಿಗಳಿಗೆ ಲೈಸೆನ್ಸ್ ನೀಡಲಾಗಿದೆ. ಸಂಗ್ರಹಿಸಿರುವ ಸುಂಕ ಎಷ್ಟು? ಕಟ್ಟಡ ನಿರ್ಮಾಣದ ವೆಚ್ಚದ ಕುರಿತು ಮರು ಪರಿಶೀಲನೆ ನಡೆಸಬೇಕು. ಒಂದು ವೇಳೆ ವ್ಯತ್ಯಾಸ ಕಂಡುಬಂದರೆ ಸೂಕ್ತ ಕಾನೂನು ಕ್ರಮತೆಗೆದುಕೊಳ್ಳಬೇಕು. ಅದೇ ರೀತಿಯಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೂಡ ಕಾರ್ಮಿಕ ಸುಂಕ ಸಂಗ್ರಹವಾಗುವುದರ ಕುರಿತು ಅಗತ್ಯ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸ್ಥಳೀಯ ಸಂಸ್ಥೆಗಳು ಹಾಗೂ ಸರ್ಕಾರದ ಕಾಮಗಾರಿಗಳನ್ನು ಕೈಗೊಳ್ಳುವ ಇಲಾಖೆಯವರು 30 ದಿನಗಳ ಅವಧಿಯಲ್ಲಿ ಸುಂಕವನ್ನು ಕಾರ್ಮಿಕರ ಕಲ್ಯಾಣ ಮಂಡಳಿಗೆ ಪಾವತಿಸಬೇಕು. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾಯ್ದೆ ಅಡಿ ಸಂಸ್ಥೆಗಳನ್ನು ನೋಂದಣಿ ಮಾಡಿಸಬೇಕು. ಇದರ ಜೊತೆಗೆ ಸರ್ಕಾರದ ವಿವಿಧ ಇಲಾಖೆಯ ಕಾಮಗಾರಿಗಳಲ್ಲಿ ತೊಡಗಿರುವ ಕಾರ್ಮಿಕರಿಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಸೌಲಭ್ಯಗಳನ್ನು ಒದಗಿಸಬೇಕು ಹಾಗೂ ಆರೋಗ್ಯ ತಪಾಸಣೆಗೆ ಕ್ರಮವಹಿಸಬೇಕು ಎಂದು ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಡಿ ಮಾತನಾಡಿ, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾಯ್ದೆ 1996 ಮತ್ತು ಕರ್ನಾಟಕ ನಿಯಮಗಳು, 2006ರ ನಿಯಮ 15ರನ್ವಯ ಕಾಮಗಾರಿ ಕೈಗೊಳ್ಳುವ ಸಂಸ್ಥೆ, ವ್ಯಕ್ತಿಯು ಕಾಮಗಾರಿ ಪ್ರಾರಂಭಗೊಂಡಿರುವ ಬಗ್ಗೆ ನಮೂನೆ–1ನ್ನು ನಿಯಮದಂತೆ ಕಾರ್ಮಿಕ ಅಧಿಕಾರಿಗಳಿಗೆ ಆನ್‌ಲೈನ್ ಮುಖಾಂತರ ಸಲ್ಲಿಸಿ, ನೋಂದಣಿ ಪತ್ರ ಪಡೆಯುವುದು ಕಡ್ಡಾಯ. ಅದರಂತೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ, 1996 ಮತ್ತು ನಿಯಮಗಳು, 1998ರ ನಿಯಮ 6(1) ರನ್ವಯ ಸುಂಕ ಪಾವತಿ ಮಾಡಿರುವ ಬಗ್ಗೆ ಮಾಹಿತಿ ನೀಡುವುದು ಕಡ್ಡಾಯವಾಗಿದೆ ಎಂದು ತಿಳಿಸಿದ ಅವರು, ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಸೌಲಭ್ಯವೂ ದೊರೆಯಬೇಕು. ಈ ನಿಟ್ಟಿನಲ್ಲಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಮುನ್ನೆಚ್ಚರಿಕಾ ಆರೋಗ್ಯ ತಪಾಸಣೆ ಮೂಲಕ ಸುಮಾರು 20 ಆರೋಗ್ಯ ತಪಾಸಣೆ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇದ್ದರೆ ಮಂಡಳಿಯ ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ ಸೌಲಭ್ಯದಡಿ ಬರುವ ಪ್ರಮುಖ ಖಾಯಿಲೆಗಳಿಗೆ (ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ) ರೂ.2 ಲಕ್ಷದವರೆಗೂ ಚಿಕಿತ್ಸೆ ಸೌಲಭ್ಯ ನೀಡಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಕಾರ್ಮಿಕ ನಿರೀಕ್ಷಕರಾದ ಡಿ.ರಾಜಣ್ಣ, ಅಲ್ಲಾ ಭಕ್ಷ್, ಟಿ.ಕುಸುಮ, ಭೀಮೇಶ್, ಬಾಲಕಾರ್ಮಿಕ ಯೋಜನಾ ಸೋಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಕಟ್ಟಡ ಕಾರ್ಮಿಕ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯ ಕಾರ್ಯನಿರ್ವಾಹಕ ಎಸ್.ವಿ.ಪ್ರಸಾದ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಸಣ್ಣ ವ್ಯತ್ಯಾಸ ಆದರೂ ಅಧಿಕಾರಿಗಳ ಮೇಲೆ ಕ್ರಮ ಜರುಗಿಸಲಾಗುವುದು: ಗೋವಿಂದಪ್ಪ

» ಹೊಸದುರ್ಗ



ರಾಗಿ ಖರೀದಿ ಕೇಂದ್ರದ ಅಧಿಕಾರಿಗಳು ಪಾರದರ್ಶಕವಾಗಿ ರಾಗಿ ಖರೀದಿ ಮಾಡಬೇಕು. ರೈತರು ಸಹ ಗುಣಮಟ್ಟದ ರಾಗಿ ಬಿಡಬೇಕು. ಸಣ್ಣ ವ್ಯತ್ಯಾಸ ಆದರೂ ಅಧಿಕಾರಿಗಳ ಮೇಲೆ ಕ್ರಮ ಜರುಗಿಸಲಾಗುವುದು. ನಿಗಮದ ಅಧ್ಯಕ್ಷನಾಗಿರುವ ನನ್ನ ಹೆಸರನ್ನು ಕಾಪಾಡುವ ಕೆಲಸ ಮಾಡಿ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಾಕೀತು ಮಾಡಿದರು.

ತಾಲ್ಲೂಕಿನ ಶ್ರೀರಾಂಪುರ ಗ್ರಾಮದ ಎಪಿಎಂಸಿ ಆವರಣದಲ್ಲಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಿಂದ ವತಿಯಿಂದ ಆಯೋಜನೆಗೊಂಡಿದ್ದ ರಾಗಿ ಖರೀದಿ ಪ್ರಕ್ರಿಯೆಗೆ ಚಾಲನೆ ನೀಡಿ ಮಾತನಾಡಿದರು. ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ ತಾಲ್ಲೂಕಿನ ಪ್ರತಿ ಮನೆಗೆ ಶುದ್ಧ ಕುಡಿಯುವ ನೀರು ಒದಗಿಸಲಾಗುವುದು. ಅಪ್ಪರ್ ಭದ್ರದಿಂದ ರೈತರ ಜಮೀನು ಗಳಿಗೆ ನೀರು ಹಾಗು ಕೆರೆ ತುಂಬಿಸುವ ಕೆಲಸ ಆಗಲಿದೆ. ತಾಲ್ಲೂಕಿನ ಜನರು ಅಭಿವೃದ್ಧಿಗಾಗಿ ನನ್ನ ಆಯ್ಕೆ ಮಾಡಿದ್ದೀರಾ, ನಾಲ್ಕು ಬಾರಿ ಶಾಸಕನಾಗಿ ಅಯ್ಕೆ ಮಾಡಿರುವ ಕ್ಷೇತ್ರದ ಜನರ ಋಣ ತೀರಿಸುವ ಕೆಲಸ ಮಾಡುತ್ತೇನೆ. ನನ್ನದು ಏನಿದ್ದರು ಅಭಿವೃದ್ಧಿ ರಾಜಕಾರಣವೇ ಹೊರತು ಎಂದಿಗೂ ಜಾತಿ ರಾಜಕಾರಣ ಮಾಡಿದವನಲ್ಲ ಎಂದು ಭದ್ರಾದಿಂದ ಪ್ರತಿ ಮನೆಗಳಿಗೆ ನೀರು ಒದಗಿಸುವ ಸಲುವಾಗಿ ಸ್ಥಾಪಿಸಲಾಗಿರುವ 150 ಪಂಪ್ ಹೌಸ್ ಗಳಿಗೆ ಹೆಚ್ಚುವರಿ ವಿದ್ಯುತ್ ನೀಡಲು ಕ್ರಮ ವಹಿಸಲಾಗಿದೆ. ತಾಲ್ಲೂಕಿನ ಆರು ಕಡೆ ವಿದ್ಯುತ್ ಉಪ ಕೇಂದ್ರ ಸ್ಥಾಪನೆ ಆಗಲಿವೆ. ಭವಿಷ್ಯದಲ್ಲಿ ತಾಲ್ಲೂಕಿನ ಜನತೆಗೆ ವಿದ್ಯುತ್, ನೀರಿನ ಸಮಸ್ಯೆ ಕಾಡುವುದಿಲ್ಲ ಎಂದರು.

ಈ ವೇಳೆ ತಹಶೀಲ್ದಾರ್ ತಹಶೀಲ್ದಾರ್ ತಿರುಪತಿ ಪಾಟೀಲ್, ಎಪಿಎಂಸಿ ಕಾರ್ಯದರ್ಶಿ ಗೌತಮ್, ರಾಗಿ ಖರೀದಿ ಕೇಂದ್ರದ ಅಧಿಕಾರಿಗಳು, ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಸ್ಥಳೀಯ ಕಾಂಗ್ರೆಸ್ ಮುಖಂಡರು ಇದ್ದರು.

### ಮಾಜಿ ದೇವದಾಸಿ ಮಹಿಳೆಯರಿಗೆ ಆರೋಗ್ಯ ತಪಾಸಣಾ ಶಿಬಿರ




» ದಾವಣಗೆರೆ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಅನುಷ್ಠಾನಗೊಳಿಸುತ್ತಿರುವ ದೇವದಾಸಿ ಪುನರ್ವಸತಿ ಯೋಜನೆ, ಜೆ.ಜೆ.ಎಂ ವೈದ್ಯಕೀಯ ಮಹಾವಿದ್ಯಾಲಯ, ಸಮುದಾಯ ಆರೋಗ್ಯ ವಿಭಾಗ, ಎಸ್ ಎಸ್ ಕೇರ್ ಟ್ರಸ್ಟ್ ಸಹಯೋಗದಲ್ಲಿ ಮಾರ್ಚ್ 18 ರಿಂದ 20 ರವರೆಗೆ ನಗರದಲ್ಲಿರುವ ಡಾ.ಶಾಮನೂರು ಶಿವಶಂಕರಪ್ಪ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಾಜಿ ದೇವದಾಸಿ ಮಹಿಳೆಯರಿಗಾಗಿ ಜಿಲ್ಲಾ ಮಟ್ಟದ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಶಿಬಿರದಲ್ಲಿ ಮಹಿಳೆಯರಿಗೆ ಸಾಮಾನ್ಯ ಆರೋಗ್ಯ ತಪಾಸಣೆಯ ಜೊತೆಗೆ ಸ್ತನ ಮತ್ತು ಗರ್ಭಕೋಶದ ಕ್ಯಾನ್ಸರ್ ಗೆ ಸಂಬಂಧಿಸಿದ ತಪಾಸಣೆಯನ್ನು ಮಾಡಿಸಲಾಯಿತು. ಮಾ.19 ರಂದು ಎರಡು ಜನ ಮಾಜಿ ದೇವದಾಸಿ ಮಹಿಳೆಯರಿಗೆ ಜಿಡ್ಡುಗಟ್ಟಿದ ಜಡೆಯನ್ನು ಕತ್ತರಿಸಲಾಯಿತು. ಶಿಬಿರದಲ್ಲಿ 150 ಜನ ಜಿಲ್ಲೆಯ ಮಾಜಿ ದೇವದಾಸಿ ಮಹಿಳೆಯರನ್ನು ತಪಾಸಣೆ ಮಾಡಲಾಯಿತು. ದೇವದಾಸಿ ಪುನರ್ವಸತಿ ಯೋಜನೆಯ ಯೋಜನಾಧಿಕಾರಿ ಮಂಜುಳ, ಐಟಿ ಯೋಜನಾ ಅನುಷ್ಠಾನಾಧಿಕಾರಿ ಪ್ರಜ್ಞಾಜಯರಾಜ್, ಬಿ.ಸಿ.ಕುಸುಮ, ಸ್ವಯಂ ಸೇವಕಿ ಭಾಗ್ಯ ಹಾಗೂ ಜೆ.ಜೆ.ಎಂ.ವೈದ್ಯಕೀಯ ಮಹಾವಿದ್ಯಾಲಯದ ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥರಾದ ಡಾ. ಅನುರೂಪ, ಪ್ರಾಧ್ಯಾಪಕ ರಾದ ಡಾ. ಶಾಲಿನಿ , ಡಾ.ದಿವ್ಯ, ಡಾ. ಪುನೀತ್ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಅಭಿಮತ

# ಆರೋಗ್ಯ ವ್ಯವಸ್ಥೆ ಸುಧಾರಣೆಗೆ ಮಾಧ್ಯಮಗಳ ಸಹಕಾರ ಅಗತ್ಯ

» ಚಿತ್ರದುರ್ಗ



ಸಾರ್ವಜನಿಕರೊಂದಿಗೆ ನೇರವಾಗಿ ವ್ಯವಹರಿಸುವ ಇಲಾಖೆಗಳಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅತಿ ಮುಖ್ಯವಾದದು. ದೇಶದ ಅಭಿವೃದ್ಧಿ ಸೂಚ್ಯಂಕದಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಗುಣಮಟ್ಟದ ಆರೋಗ್ಯ ಪ್ರಧಾನ ಎನಿಸುತ್ತದೆ. ಇಂತಹ ಆರೋಗ್ಯ ವ್ಯವಸ್ಥೆ ಸುಧಾರಣೆಗೆ ಮಾಧ್ಯಮಗಳ ಸಹಕಾರ ಅಗತ್ಯ ಎಂದು ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಅಭಿಪ್ರಾಯ ವ್ಯಕ್ತಪಡಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮಗಳ ಕುರಿತು, ಜಿಲ್ಲೆಯ ಪತ್ರಿಕಾ ಹಾಗೂ ವಿದ್ಯುನ್ಮಾನ ವಾಹಿನಿಗಳ ಮಾಧ್ಯಮ ಪ್ರತಿನಿಧಿಗಳಿಗೆ, ನಗರದ ಐಶ್ವರ್ಯ ನವೀನ್ ಹೋಟೆಲ್‌ನಲ್ಲಿ ಏರ್ಪಡಿಸಲಾದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಆಶಾ, ನರ್ಸ್, ಆರೋಗ್ಯಕಾರ್ಯಕರ್ತರು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಜಿಲ್ಲಾಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಜನರ ಜೀವನಾಡಿಗಳಾಗಿವೆ. ಇವುಗಳ ಹೊರತಾಗಿಯೂ ಆರೋಗ್ಯ ಇಲಾಖೆ ವತಿಯಿಂದ ಬಹಳಷ್ಟು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಜಿಲ್ಲೆಯಲ್ಲಿ ಗರ್ಭಿಣಿ ಹಾಗೂ ಬಾಣಂತಿಯರ ಆರೈಕೆ, ತಾಯಿ ಹಾಗೂ ಶಿಶು ಮರಣ ತಗ್ಗಿಸುವುದು, ಲಸಿಕಾಕರಣ, ಸಾಂಕ್ರಮಿಕ ಹಾಗೂ ಮಾರಕ ರೋಗಗಳ ತಡೆ ಮತ್ತು ನಿಯಂತ್ರಣ, ಶಾಲಾ ಮಕ್ಕಳ ಬೆಳವಣಿಗೆ ಹಾಗೂ ಆರೋಗ್ಯ ಬಗ್ಗೆಯೂ ನಿಗಾ ಇರಿಸಲಾಗಿದೆ. ಇದಕ್ಕಾಗಿ ಜಿಲ್ಲಾ ಮಟ್ಟದಲ್ಲಿ ತಜ್ಞ ವೈದ್ಯರ ತಂಡ ಅವಿರತವಾಗಿ ಕರ್ತವ್ಯ ನಿರ್ವಹಿಸುತ್ತಿದೆ. ಸೂಕ್ತ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿ ಕೊರತೆಯ ನಡುವೆಯೂ ಸಾಧ್ಯವಾದಷ್ಟು ಉತ್ತಮವಾಗಿ ಕಾರ್ಯನಿರ್ವಹಿಸಲಾಗುತ್ತಿದೆ. ಆರೋಗ್ಯ ಇಲಾಖೆ ಕಾರ್ಯವೈಖರಿಯ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡುವ ಸಲುವಾಗಿ ಈ ಕಾರ್ಯಾಗಾರ ಆಯೋಜಿಸಲಾಗಿದೆ. ಜಿಲ್ಲೆಯ ಆರೋಗ್ಯ ವ್ಯವಸ್ಥೆಯ ಕುರಿತು ಮಾಧ್ಯಮಗಳು ಬಿತ್ತರ ಹಾಗೂ ಪ್ರಕಟ ಮಾಡುವ ವರದಿಗಳನ್ನು ಸಮಚಿತ್ತ ಮನೋಭಾವದಿಂದ ಸ್ವೀಕರಿಸಿ ಸುಧಾರಣೆ ಕ್ರಮ ಕೈಗೊಳ್ಳುತ್ತಿರುವುದಾಗಿ ಸಿಇಓ ಎಸ್.ಜೆ. ಸೋಮಶೇಖರ್ ತಿಳಿಸಿದರು.


ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರೇಣುಪ್ರಸಾದ್ ಮಾತನಾಡಿ, ಜಿಲ್ಲೆಯ ಮಾಧ್ಯಮಗಳು ಆರೋಗ್ಯ ಇಲಾಖೆಯ ಬಗ್ಗೆ ಸಕಾರಾತ್ಮಕ ಹಾಗೂ ನಕಾರಾತ್ಮ ವರದಿಗಳನ್ನು ಪ್ರಕಟ ಮಾಡುತ್ತಿವೆ. ಆರೋಗ್ಯ ಇಲಾಖೆಯ ಕಾರ್ಯವೈಖರಿ ಮೆಚ್ಚಿ, ಸಕಾರಾತ್ಮ ವರದಿಗಳು ಪ್ರಕಟವಾದಾಗ ಹೆಚ್ಚಿನ ಕೆಲಸ ನಿರ್ವಹಿಸಲು ಸ್ಫೂರ್ತಿ ದೊರೆಯುತ್ತದೆ. ನಕಾರಾತ್ಮ ವರದಿಗಳು ಪ್ರಕಟವಾದ ಎಚ್ಚತ್ತು, ಲೋಪದೋಷಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸಲು ಅವಕಾಶ ದೊರಕುತ್ತದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಮಾಧ್ಯಮಗಳು ಇಲಾಖೆಯೊಂದಿಗೆ ಉತ್ತಮ ಬಾಂಧವ್ಯದೊಂದಿಗೆ ಕಾರ್ಯನಿರ್ವಹಿಸಬೇಕು. ಇಲಾಖೆ ಬಗ್ಗೆ ತಟಸ್ಥ ಮನೋಭಾವ ತಾಳಬಾರದು. ಇದರಿಂದ ಅವಲೋಕನ ಸುಧಾರಣೆ ತರಲು ಅಡ್ಡಿ ಉಂಟಾಗುತ್ತದೆ ಎಂದರು.

ಜಿಲ್ಲಾ ವಾರ್ತಾಧಿಕಾರಿ ಬಿ.ವಿ. ತುಕಾರಾಂರಾವ್ ಮಾತನಾಡಿ, ಆರೋಗ್ಯ ಇಲಾಖೆ ಹಾಗೂ ಮಾಧ್ಯಮಗಳು ಒಂದು ಬಂಡಿಯ ಎರಡು ಚಕ್ರಗಳಿದ್ದಂತೆ, ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಬೇಕು. ಕೋವಿಡ್ ಸಮಯದಲ್ಲಿ ಸಾಕಷ್ಟು ಮಾಧ್ಯಗಳು ಸಂಕಷ್ಟಕ್ಕೆ ಸಿಲುಕಿದವು. ಪತ್ರಕರ್ತರು ಸಹ ಕೋವಿಡ್‌ಗೆ ಬಲಿಯಾದ ಪ್ರಸಂಗಳು ನಡೆದಿವೆ. ಮಾಧ್ಯಮಗಳು ಯಾವುದೇ ಸಾಂಕ್ರಾಮಿಕ ರೋಗಗಳು ಸೇರಿದಂತೆ ಹಲವಾರು ಗಂಭೀರ ಖಾಯಿಲೆಗಳ ಕುರಿತು ವಸ್ತುಸ್ಥಿತಿ ತಿಳಿಸಬೇಕು. ಸಾರ್ವಜನಿಕರನ್ನು ಭಯ ಭೀತರನ್ನಾಗಿ ಮಾಡುವುದರ ಬದಲಾಗಿ, ಈ ಖಾಯಿಲೆಗಳ ಕುರಿತು ಜನಜಾಗೃತಿ ಮೂಡಿಸುವ, ಖಾಯಿಲೆಗಳು ಬಾರದಂತೆ ಹಾಗೂ ಹರಡದಂತೆ ತಡೆಯಲು ಕೈಗೊಳ್ಳಬೇಕಾದ ಮಾರ್ಗೋಪಾಯಗಳ ಕುರಿತ ಆರೋಗ್ಯ ಇಲಾಖೆ ಹೊರಡಿಸುವ ಪ್ರಕಟಣೆಗಳನ್ನು ವರದಿ ಮಾಡಿ, ಸಾಮಾಜಿಕ ಕಳಕಳಿ ಹಾಗೂ ಬದ್ಧತೆಯನ್ನು ಪ್ರದರ್ಶಿಸುವಂತೆ ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಬಿ ಗೌಡಗೆರೆ ಮಾತನಾಡಿ, ಮಾಧ್ಯಮ ಕ್ಷೇತ್ರದಲ್ಲಿ ಪತ್ರಕರ್ತರು ಒತ್ತಡದಲ್ಲಿಯೇ ಕೆಲಸ ನಿರ್ವಹಿಸುತ್ತಾರೆ. ಆರೋಗ್ಯದ ಬಗ್ಗೆ ಗಮನ ಸಹ ಹರಿಸುವುದಿಲ್ಲ. ಇದರಿಂದಾಗಿ ಚಿಕ್ಕ ವಯಸ್ಸಿನಲ್ಲಿಯೇ ರಕ್ತದೊತ್ತಡ, ಸಕ್ಕರೆ ಖಾಯಿಲೆಗಳಿಗೆ ತುತ್ತಾಗುತ್ತಾರೆ. ಕಳೆದ ವರ್ಷ ರಾಜ್ಯಾದ್ಯಂತ ಬಹಳಷ್ಟು ಪತ್ರಕರ್ತರು ಅಕಾಲಿಕ ಮರಣಕ್ಕೆ ತುತ್ತಾಗಿದ್ದಾರೆ. ಆರೋಗ್ಯ ಇಲಾಖೆ ವತಿಯಿಂದ ಪತ್ರಕರ್ತರಿಗಾಗಿ ಉಚಿತ ಚಿಕಿತ್ಸಾ ಶಿಬಿರಗಳನ್ನು ಆಯೋಜಿಸಬೇಕು. ಇಲಾಖೆ ಐಇಸಿ ಚಟುವಟಿಕೆಗಳ ಅಡಿ ಪ್ರಮುಖ ಸಾರ್ವಜನಿಕ ನಿವೇದನೆ ಹಾಗೂ ಪ್ರಕಟಣೆಗಳನ್ನು ಜಾಹೀರಾತು ರೂಪದಲ್ಲಿ ಪತ್ರಿಕೆಗಳಿಗೆ ಬಿಡುಗಡೆ ಮಾಡಿದರೆ ಸ್ಥಳೀಯ ಪತ್ರಿಕೆಗಳಿಗೆ ಆದಾಯ ದೊರಕುತ್ತದೆ. ಈ ನಿಟ್ಟಿನಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಗಮನ ಹರಿಸುವಂತೆ ಕೋರಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್, ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ.ಕಾಶಿ, ಡಾ.ಚಂದ್ರಶೇಖರ್ ಕಂಬಾಳಿ ಮಠ್, ಡಾ. ನಾಗರಾಜ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣಾ ನಾಯಕ್, ಸಹಾಯಕ ಆರೋಗ್ಯ ಶಿಕ್ಷಣಾಧಿಕಾರಿ ಮಂಜುನಾಥ್, ಮೂಗಪ್ಪ ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.





# ಬದುಕಿನ ಯಶಸ್ಸೆಂದರೇ ಕೇವಲ ಹಣ ಗಳಿಕೆಯಲ್ಲ!

ಬದುಕಿನಲ್ಲಿ ಯಶಸ್ಸು ಸುಮ್ಮನೆ ಬರುವುದಿಲ್ಲ. ಬಂದ ಯಶಸ್ಸು ಸುಮ್ಮನೆ ಬಳಿಯಿರುವುದಿಲ್ಲ. ಯಶಸ್ಸು ಗಳಿಸಲು ಮತ್ತು ಉಳಿಸಿಕೊಳ್ಳಲು ಪರಿಶ್ರಮಪಡುತ್ತಲೇ ಇರಬೇಕು. ಬಹುತೇಕ ಯಶಸ್ಸು ಪಡೆದ ಪ್ರತಿಭಾವಂತರ ಹಿಂದೆ ಬಹಳ ನೋವುಗಳ ಬದುಕಿದೆ. ದುಃಖ ದುಮ್ಮಾನದ ವ್ಯಥೆಯಿದೆ. ಸೋಲುಗಳ ಸರಣಿಯಿದೆ. ಕೌಟುಂಬಿಕ ಅವ್ಯವಸ್ಥೆಯಿದೆ. ಸಾಮಾಜಿಕ ಏರುಪೇರುಗಳಿವೆ. ಭಾವನಾತ್ಮಕ ತೊಳಲಾಟಗಳಿವೆ. ಕಣ್ಣೀರ ಕಡಲಿನ ಕಥೆಗಳಿವೆ.

ಕಿಯಾನು ಚಾರ್ಲ್ಸ್ ರೀವ್ಸ್ ಬಹಳ ಪ್ರಸಿದ್ಧ ಹಾಲಿವುಡ್ ನಟ. ತನ್ನ ನಟನೆಯ ಉತ್ತುಂಗದಲ್ಲಿ ಬಹು ಕೋಟಿಗಳ ಲೆಕ್ಕದಲ್ಲಿ ಸಂಭಾವನೆ ಪಡೆಯುವ ನಟನಾಗಿದ್ದವನು. ಅಷ್ಟಾಗಿದ್ದರೆ ಇದು ಬರೀ ಹಣವಂತನ ಕತೆಯಾಗಿ ನೂರರಲ್ಲಿ ಒಂದಾಗುತ್ತದೆ. ಆದರೆ ಇದು ಗುಣವಂತನ ಕತೆ! ಬಾಲ್ಯದಲ್ಲಿ ಕಿಯಾನುಗೆ ನಟನಾಗಬೇಕೆಂಬ ಅತಿ ಉಮ್ಮೇದೇನು ಇರಲಿಲ್ಲ. ವಿದ್ಯಾಭ್ಯಾಸದ ಹೈಸ್ಕೂಲು ಹಂತದಲ್ಲಿ ಆಗಾಗ ರಂಗದಲ್ಲಿ ಒಂದೆರಡು ನಾಟಕಗಳಲ್ಲಿ ಅಭಿನಯಿಸಿದ್ದನು. ಅಷ್ಟೆ ಅಲ್ಲ ಅಲ್ಲಿನ ಸ್ಕೂಲ್ ಆಫ್ ಆರ್ಟ್ಸ್‌ನಿಂದ ಇವನ ಜೋರು ಬಾಯಿ ತಂಟೆಕೋರತನ ಜಿಗುಟು ಸ್ವಭಾವದಿಂದ ಶಾಲೆಯಿಂದ ಆಗಾಗ ಡಿಬಾರ್ ಸಹ ಆಗುತ್ತಿದ್ದನು. ಓದು ಬರಹದ ಚುರುಕುಮತಿಯೂ ಆಗಲಿಲ್ಲ. ಮುಂದೆ ಪದವಿ ಪಡೆಯುವಾಗ ಹಾಕಿ ತಂಡದ ಗೋಲ್ ಕೀಪರ್ ಆಗಿದ್ದವನು. ಹಾಗೆಲ್ಲ ತನ್ನ ತಂಡದಲ್ಲಿ ಗೋಡೆಯೆಂದೇ ಹೆಸರು ಗಳಿಸಿದ್ದವನು. ಕಿಯಾನ್ ಇದ್ದರೆ ಮುಗಿಯಿತು ತಂಡಕ್ಕೆ ಗೆಲುವೊಂದೇ ಖಚಿತ. ಆದರೆ ತನ್ನ ಕುಟುಂಬದ ನೆಲೆಕಾಣದ ಅಸ್ಥಿರತೆ ಅಲೆದಾಟದಿಂದ ಕಾಲೇಜು ವಿದ್ಯಾಭ್ಯಾಸವೂ ಮುಂದುವರೆಯಲಿಲ್ಲ. ಅವನ ತಾಯಿಯಂತು ಯಾರೊಂದಿಗೂ ಹೊಂದಿಕೊಂಡು ಹೋಗುವಂತಹ ತಾಳ್ಮೆಯ ಮುಂದಾಲೋಚನೆಯ ಸ್ವಭಾವದವಳಾಗಿರಲಿಲ್ಲ. ಮೇಲಿಂದ ಮೇಲೆ ತನ್ನ ವೈವಾಹಿಕ ಸಂಬಂಧಗಳ ಬದಲಾಯಿಸುತ್ತಿದ್ದಳು. ಕಿಯಾನು ರೀವ್ಸನ ಬಯಾಲಾಜಿಕಲ್ ತಂದೆ ಅವನು ಮೂರು ವರ್ಷದವನಿದ್ದಾಗಲೇ ಬಿಟ್ಟು ಹೋದದ್ದು ಅವನ ಬಾಳಿನ ಬಹು ದುಃಖಕರ ಸಂಗತಿ. ಅಲ್ಲಿಂದ ಶುರುವಾದ ಬದುಕಿನ ನೋವಿನ ಅಲೆದಾಟ ಜೀವನದ ಕೊನೆಯವರೆಗು ನಿಂತದ್ದೇ ಇಲ್ಲ.

ಲೆಬನಾನ್ ದೇಶದ ಬೈರೂತ್ ನಲ್ಲಿ ಸೆಪ್ಟೆಂಬರ್ 2, 1964 ರಂದು ಜನಿಸಿದ ಕಿಯಾನು ಚಾರ್ಲ್ಸ್ ರೀವ್ಸ್ ತನ್ನ ಜೀವನದ ಬಹು ಸಮಯ ಕಳೆದದ್ದು ಕೆನಡಾದಲ್ಲಿ. ತಾಯಿ ಪೇಟ್ರೀಶಿಯಾ ಬಾಂಡ್ ತಂದೆ ಸ್ಯಾಮ್ಯುಯೆಲ್ ನೋವ್ಲಿನ್ ರೀವ್ಸ್. ಆಂಗ್ಲ ಸಂಸ್ಕೃತಿ ಹಿನ್ನೆಲೆಯ ಪೇಟ್ರೀಷಿಯಾ ಭೈರೂತ್ ನಲ್ಲಿ ಟೈಲರಿಂಗ್ ಕೆಲಸದಲ್ಲಿರುವಾಗ ಅಮೇರಿಕಾ ಹವಾಯಿಯನ್ ಸಂಸ್ಕೃತಿಯ ಸ್ಯಾಮ್ಯುಯೆಲ್ ನೋವ್ಲಿನ್ ರೀವ್ಸ್ ಪರಿಚಯವಾಗಿ ಸತಿಪತಿಗಳಾದರು. ಅವನ ತಂದೆ ಸ್ಯಾಮ್ಯುಯೆಲ್ ಅಪಾರಾಧದ ಹಿನ್ನೆಲೆಯಲ್ಲಿ ಜೈಲು ಸೇರಿದವನು ಬಿಡುಗಡೆಯ ನಂತರವು ಹೆಂಡತಿ ಮತ್ತು ಮಗನ ಬಳಿ ಬರಲಿಲ್ಲ. ಚಿಕ್ಕಪ್ಪನಾದ ಹೆನ್ರಿ ಕಿಯಾನೊ ರೀವ್ಸ ಬಹು ಅಕ್ಕರೆ ಕಾಳಜಿಯಿಂದ ಚಾರ್ಲ್ಸ್ ರೀವ್ಸನನ್ನು ಪೋಷಿಸಿದನು. ಆದರೆ ತಾಯಿಯ ವೈವಾಹಿಕ ಜೀವನದ ಅಸ್ಥಿರತೆಯಿಂದ ಆಸ್ಟ್ರೇಲಿಯಾ, ಬ್ರಿಟನ್, ಲ್ಯಾಟಿನ್ ಅಮೇರಿಕ ಅಲೆದು ಯುನೈಟೆಡ್ ಸ್ಟೇಟ್ಸ ನಂತರ ಕೆನಡಾದ ಟೊರಾಂಟೊದಿ ನೆಲೆಯಾದರು. ಅವನ ಮಲ ತಂದೆಯಿಂದ ಎಮ್ಮ ರೋಸ್, ಕಿಮ್, ಕರಿನಾ ಮಿಲ್ಲರ್ ಎಂಬ ಸಹೋದರಿಯರಾದರು. ಕಿಯಾನೊನ ಮುದ್ದಿನ ತಂಗಿಯಾದ ಕಿಮ್ ಚಿಕ್ಕಂದಿನಲ್ಲೆ ಲ್ಯುಕಿಮಿಯಾದಿಂದ ನರಳಿ ತೀರಿಕೊಂಡಳು. ಇದು ಅವನಿಗೆ ತಂದೆಯ ನಿರ್ಗಮನದ ನಂತರ ಬಹಳ ದುಃಖ ನೀಡಿತು. ಮನೆಬಿಟ್ಟು ಬಹುಕಾಲ ಅಲೆಮಾರಿಯಂತೆ ಅಲೆದಾಡುವಂತೆ ಮಾಡಿತು.

ಪದವಿ ಅಪೂರ್ಣತೆಯೊಂದಿಗೆ ಜೀವನೋಪಾಯಕ್ಕೆ ಪ್ರೆಸ್ ನಲ್ಲಿ ವಿವಿಧ ರಂಗಶಾಲೆಗಳಲ್ಲಿ ಕೆಲಸಕ್ಕೆ ತೊಡಗಿದ. ಆಗ ಸ್ವ ಚಿಂತನದಿ ಮುಳುಗಿ ತನ್ನ ಶಕ್ತಿ ಸಾಮರ್ಥ್ಯಗಳೇನು ಎಂದು ಓರೆ ಹಚ್ಚಿಕೊಂಡ. ತನ್ನೊಳಗೆ ಒಬ್ಬ ಅತ್ಯದ್ಭುತ ನಟನಿರುವುದನ್ನು ಕಂಡುಕೊಂಡ ಕಿಯಾನೊ ಚಾರ್ಲ್ಸ್ ರೀವ್ಸ್ ಮೊದಮೊದಲು ತನ್ನ ಸೆಕೆಂಡರಿ ಸ್ಕೂಲ್ ಗಳಲ್ಲಿ ಅಭಿನಯಿಸಿದ ಪರಿ ನೆನೆದು ಮುಂದೇನು ಮಾಡಬೇಕೆಂದು ಯೋಜಿಸಿಕೊಂಡ. ರಂಗಶಾಲೆಯಲ್ಲಿ ಸಣ್ಣಪುಟ್ಟ ಪಾತ್ರಗಳ ನಟರು ಬರದಿದ್ದಾಗ ಸಿಕ್ಕ ಅವಕಾಶವೆಂದು ರಂಗದಲ್ಲಿ ಅಭಿನಯಿಸಿದ. ಅವನ ಭಾವನೆಗಳ ಅಭಿವ್ಯಕ್ತಿ ಹಾಗು ಆಂಗಿಕ ಚಲನೆಗೆ ಮಾರುಹೋದ ರಂಗ ನಿರ್ದೇಶಕರು ಹ್ಯಾಮ್ಲೆಟ್ ನಾಟಕದಲ್ಲಿ ಮುಖ್ಯ ಪಾತ್ರವನ್ನೇ ನೀಡಿದರು. ಷೇಕ್ಸಪಿಯರನ ಹ್ಯಾಮ್ಲೆಟ್ ನಲ್ಲಿ ಕಿಯಾನೊ ಅಭಿನಯ ಕಂಡ ಸಂಡೆ ಟೈಮ್ಸ್ ಪ್ರಧಾನ ರಿಪೋರ್ಟರ್ ರೋಜರ್ ಲೆವಿಸ್ "ನಾನು ನೋಡಿದ ಅತ್ಯದ್ಭುತ ಹ್ಯಾಮ್ಲೆಟ್ ಪಾತ್ರಧಾರಿಯೆಂದರೆ ಕಿಯಾನೋ ರೀವ್ಸದು. ಅವನದು ಪಾತ್ರದಲ್ಲಿ ಪರಕಾಯ ಪ್ರವೇಶವೇ ಸರಿ" ಎಂದು ಶ್ಲಾಘಿಸಿ ಬರೆದನು. ಇದು ಅವನ ನಟನೆಯ ಜೀವನಕ್ಕೆ ಹೆದ್ದಾರಿ ಸೃಷ್ಟಿಸಿತು.



ಮುಂದೆ ರೋಮಿಯೋ ಜೂಲಿಯಟ್ ನಾಟಕವು ಹೆಸರು ತಂದುಕೊಟ್ಟಿತು. ದೂರದರ್ಶನದ ಸಿಬಿಸಿ ಛಾನೆಲ್ ಹಾಸ್ಯ ಕಾರ್ಯಕ್ರಮ ಹ್ಯಾಂಗ್ ಇನ್ ನಿಂದ ಮತ್ತಷ್ಟು ಜನರಿಗೆ ಪರಿಚಿತ ಮಾತುಗಾರ ನಟನಾ ಕುಶಲಿಯಾದನು. ಹಣದ ಅಗತ್ಯತೆಗಳಿಗಾಗಿ ಕೋಕಾಕೋಲಾ ಜಾಹಿರಾತು, ಒನ್ ಸ್ಟೆಪ್ ಅವೇ, ವೂಲ್ಫ ಬಾಯ್ ನಂತಹ ಲಘು ಕಾರ್ಯಕ್ರಮಗಳಲ್ಲು ಮಿಂಚಿದನು. 1984 ರಲ್ಲಿ ಕೆನಡಾ ಬ್ರಾಡ್ ಕಾಸ್ಟಿಂಗ್ ಕಾರ್ಪೋರೇಷನ್ ಯುವಕರ ಕಾರ್ಯಕ್ರಮ ಗೋಯಿಂಗ್ ಗ್ರೇಟ್ ನ ವರದಿಗಾರ ನಿರೂಪಕರಾಗಿ ಜನಮನ ಗೆದ್ದನು. ಮನೆಯಲ್ಲಿ ಸದಾ ತಾಯಿಯ ಸಿಟ್ಟು ಜಗಳ ಆಡಂಭರದ ಜೀವನದ ಆಸೆಬುರುಕುತನ ಮಲತಂದೆಯರ ಹಣದ ಹಪಾಹಪಿ ನಡುವೆಯೇ ಕಿಯಾನೊ ತನ್ನ ನಟನೆಯ ಕೌಶಲವನ್ನೆ ನೆಚ್ಚಿಕೊಂಡು ಬೆಳೆಯಲು ಅತಿ ಉತ್ಸುಕನಾಗಿ ಹೊರಟನು.

ಕಿಯಾನೊ ನಟನಾ ದಾರಿ ಮುಂದೆ ಅಮೇರಿಕಾದ ಲಾಸ್ ಏಂಜಲೀಸಗೆ ಕರೆತಂದಿತು. ಅಲ್ಲಿ ಸಮರ್ಥ ಸಿನೆಮಾ ಏಜೆಂಟರ ಮೂಲಕ ಉತ್ತಮ ಚಿತ್ರಗಳ ನಟನೆಯು ದೊರಕಿತು. ರೋಬ್ ಲೊವೆ, ಯಂಗ್ ಬ್ಲಡ್, ರಿವರ್ಸ ಎಡ್ಜ, ಬಿಲ್ ಅಂಡ್ ಟೆಡ್ಸ ಮುಂತಾದ ಯಶಸ್ವಿ ಚಿತ್ರಗಳ ಹೀರೋ ಆಗಿ ಹಾಲುವುಡ್ ಚಿತ್ರರಸಿಕರ ಮನಸೂರೆಗೊಂಡನು. ತನ್ನ ಬಾಲ್ಯದ ದಡ್ಡತನ ಉಡಾಳತನ ತಂದೆ ತಂಗಿಯ ನಿರ್ಗಮನ ತಾಯಿಯ ಜವಾಬ್ದಾರಿರಹಿತತೆಯ ನಡುವೆಯೇ ತನ್ನೆಲ್ಲ ನೋವನ್ನು ನಟನೆಯ ಮೂಲಕ ಮರೆಯಲು ಪ್ರಯತ್ನಿಸಿದನು.

ಬಿಲ್ ಅಂಡ ಟೆಡ್ ಸರಣಿ ಹಾಸ್ಯ ಚಿತ್ರಗಳಲ್ಲಿ ಅದೆಷ್ಟು ತನ್ಮಯನಾಗಿ ಕಿಯಾನೋ ನಟಿಸಿದನೆಂದರೆ ಇವನೊಬ್ಬ ಸದಾ ಸಂತಸದ ಸುಖೀ ನೆಮ್ಮದಿಯ ವ್ಯಕ್ತಿಯೇನೋ ಎಂಬಂತೆ ಜನರು ಮರುಳಾಗುವ ಮಟ್ಟಿಗೆ. ಕಿಯಾನೊನ ಅಳುವ ಜೀವನದ ಕಡಲೊಳು ತೇಲಿಬರುವ ನಗೆಯ ಹಾಯಿದೋಣಿಯೆಂದರೆ ಅವನ ಸಿನೆಮಾಗಳು. ಪಾಯಿಂಟ್ ಬ್ರೇಕ್ ನಂತಹ ದುಬಾರಿ ವೆಚ್ಚದ ಚಿತ್ರಗಳು ಕಿಯಾನೊನನ್ನು ಪ್ರಪಂಚದ ಚಿತ್ರಪ್ರೇಮಿಗಳಿಗೆ ಪರಿಚಯಿಸಿತು. ಎಂಟಿವಿ ಅವಾರ್ಡ್ ಭಾಜನನಾಗಿ ಮುಂದೆ ರಿವರ್ ಫೋನಿಕ್ಸ, ಮೈ ವೋನ್ ಪ್ರೈವೈಟ್ ಐಡಾವೋ, ಸ್ಪೀಡ್ ಚಿತ್ರಗಳಿಂದ ಬಹು ಬೇಡಿಕೆಯ ಹಾಲಿವುಡ್ ನಟನಾದನು. ಅಂದಿನ ಪತ್ರಿಕೆಗಳು ಇವನನ್ನು "ಭಾವುಕತೆಯ ವ್ಯಕ್ತಿ, ಪಶುಸಹಜ ಅಂಗಸೌಷ್ಟಹೊಂದಿದ ಸಂದರಾಂಗ ಮುಗ್ಧತೆಯ ಜೊತೆಗೆ ಅರಿ ಕೋಪವು ಸೇರಿದ ವೃತ್ತಿ ಪ್ರೇಮಿಯಾಗಿದ್ದಾನೆ. ಕುಶಲ ನಟನೆ ನಡಿಗೆಯಿಂದ ಡೆನ್ಮಾರ್ಕನ ರಾಜಕುಮಾರನೇ ಆಗಿದ್ದಾನೆಂದು ಬಣ್ಣಿಸಿದವು"

ಈ ನಡುವೆಯೇ 1999 ರಲ್ಲಿ ಅವನ ಗೆಳತಿ ಜೆನಿಫರ್ ಸಿಮ್ ಜೊತೆಗೆ ವಿವಾಹ ಬಂಧನವಾಯಿತು. ಆದರೆ ಅವನ ಬಹು ನಿರೀಕ್ಷಿತ ಪ್ರೀತಿಯ ಮೊದಲ ಮಗು ಪ್ರಸವ ಪೂರ್ವದಲ್ಲೆ ಮರಣ ಹೊಂದಿತು! ಮತ್ತೂ ದುರಂತವೆಂದರೆ ಕಿಯಾನೊನ ಪ್ರೀತಿಯ ಮಡದಿ ಜೆನಿಫರ್ ಸಿಮ್ 2001 ರಲ್ಲಿ ಕಾರು ಅಪಘಾತದಲ್ಲಿ ತೀರಿಕೊಂಡಳು. ಕಿಯಾನೊನ ಬದುಕು ಮತ್ತಷ್ಟು ದುಃಖದ ಕಡಲಾಯಿತು. ಮುಂದೆ 2008 ರಲ್ಲಿ ಒಬ್ಬ ಪೇಪರಾಜೊ ತನ್ನ ಕಾರಿಗೆ ಕಿಯಾನೊ ತನ್ನ ಪೋರ್ಶೆ ಕಾರಿನಿಂದ ಗುದ್ದಿರುವುದಾಗಿ ಗುಲ್ಲಾಯಿತು. ಕಿಯಾನೋನ ಸಿನೆಮಾ ಕೆರಿಯರ್ ಗ್ರಾಫ್ ಬುಡಮೇಲಾಗುವ ಆಪತ್ತು ಎದುರಾಯಿತು. ಆದರೆ ಮುಂದೆ ನ್ಯಾಯಾಲಯದಿ ಅದು ನಿರಾಧಾರವೆಂದು ಸಾಬೀತಾಗಿ ಕಿಯಾನೊ ಮತ್ತೆ ಸಿನೆಮಾಗಳ ನಟನೆಯಲ್ಲಿ ತೊಡಗಿದ ಮ್ಯಾಟ್ರಿಕ್ಸ್ ಸರಣಿ ಚಿತ್ರಗಳು ಗಲ್ಲಾಪಟ್ಟಿಗೆ ದೋಚಿದವು. ವಿಶೇಷವೆಂದರೆ ಭಾರತೀಯ ಕಥಾನಕದ ಲಿಟಲ್ ಬುದ್ಧದಲ್ಲಿ ಬುದ್ಧನಾಗಿ ಹಾಗು ರಾಮಾಯಣಾಧಾರಿತ ಹನುಮಾನ್ ನಲ್ಲಿ ರಾಮನಾಗಿ ಅಭಿನಯಿಸಿದ್ದಾನೆ! ಚಿಕ್ಕಂದಿನ ಬದುಕಿನ ಅಸ್ಥಿರತೆ, ತಂದೆಯಿಲ್ಲದ ಅಭದ್ರತೆ, ತಾಯಿಯ ಮಮತೆಯು ಸಿಗದೆ ಬೆಳೆದ ಕಿಯಾನೊ ಚಿತ್ರಜಗತ್ತಿನಲ್ಲಿ ಹೊಳೆವ ನಕ್ಷತ್ರವಾಗಿರುವುದೊಂದು ಅದ್ಭುತ. ತನ್ನ ಸ್ವ ಸಾಮರ್ಥ್ಯ ಹಾಗು ನಟನಾ ಚಾತುರ್ಯವನ್ನೆ ನಂಬಿಕೊಂಡು ಎಲ್ಲು ತನ್ನ ಹೆಸರು ಕೆಡಿಸಿಕೊಳ್ಳದಂತೆ ತನ್ನ ವ್ಯಕ್ತಿತ್ವದ ತೇಜಸ್ಸನ್ನು ಜಗತ್ತಿಗೆ ತೋರಿದನು.

ಕಿಯಾನೊ ತನ್ನ ವೈಯುಕ್ತಿಕ ಬದುಕಿನ ದುರಂತದಲ್ಲೆ ಯಶಸ್ವಿ ಚಿತ್ರಗಳಿಂದ ಹಣಗಳಿಸಿದ. ಹಾಗೆಯೇ ನೋವು ದಃಖ ಕಷ್ಟಗಳಲ್ಲಿದ್ದವರಿಗೆ ನೆರವಾಗಿ ಮಾನವೀಯ ಮೌಲ್ಯದ ವ್ಯಕ್ತಿಯಾದನು. ತನ್ನ ಲೇಕ್ ಹೌಸ್ ಚಿತ್ರ ಚಿತ್ರೀಕರಿಸುವಾಗ ತನ್ನ ಇಬ್ಬರು ವೇಷಭೂಷಣ ಸಹಾಯಕರ ನಡುವಿನ ಮಾತುಕತೆ ಕೇಳಿದ ಅಲ್ಲಿ ಒಬ್ಬ ಮಹಿಳೆ 20,000 ಡಾಲರ್ ಪಾವತಿಸಲು ಸಾಧ್ಯವಾಗದಿದ್ದರೆ ತನ್ನ ಮನೆಯನ್ನು ಕಳೆದುಕೊಳ್ಳಬಹುದು ಎಂದು ಅಳುತ್ತಿದ್ದಳು. ವಿಷಯ ತಿಳಿದ ಚಾರ್ಲ್ಸ್ ತನ್ನ ಸಹಾಯಕಿಗೆ ಆ ತಕ್ಷಣವೇ ಅಷ್ಟೂ ಮೊತ್ತವನ್ನು ಆಕೆಯ ಖಾತೆಗೆ ಜಮಾ ಮಾಡಿ ಅವಳ ಔದಾರ್ಯಕ್ಕೆ ಪಾತ್ರನಾದನು. 2010 ರಲ್ಲಿ ತನ್ನ ಜನ್ಮದಿನದಂದು ಬೇಕರಿಗೆ ಒಬ್ಬನೇ ಹೋಗಿ ಬಹಳ ಸರಳವಾಗಿ ಒಂದೇ ಮೇಣದಬತ್ತಿಗಿಂತ ಹೆಚ್ಚೇನೂ ಇಲ್ಲದ ಕಪ್ಕೇಕ್ ಅನ್ನು ಖರೀದಿಸಿ ಹುಟ್ಟಿದ ಹಬ್ಬ ಆಚರಿಸಿ ಅಲ್ಲಿನ ಕಾರ್ಮಿಕರಿಗು ಬೀದಿಬದಿಯ ಭಿಕ್ಷಕರಿಗು ಬಟ್ಟೆ ಕೊಡಿಸಿ ಹಣ ನೀಡಿ ಅಲ್ಲಿದ್ದವರಿಗೆಲ್ಲ ಕೇಕ್ ಕಾಫಿ ಬ್ರೆಡ್ ಕೊಡಿಸಿ ಸಂಭ್ರಮಿಸಿದರು ಇದು ಕಿಯಾನೋ ಐಷಾರಾಮಿ ಹುಟ್ಟುಹಬ್ಬ! ಅವನ ಸರಳತೆ ಬಡವರ ಕುರಿತ ಕಕ್ಕುಲತೆ ಎಲ್ಲ ಸಿರಿವಂತರಿಗು ಮಾದರಿ. ದಿ ಮ್ಯಾಟ್ರಿಕ್ಸ್ ಟ್ರೈಲಾಜಿ ಸಿನೆಮಾದ ಅಪಾರ ಹಣ ಗಳಿಕೆಯನ್ನು ಅವರು ತನ್ನ ಚಿತ್ರದ ಟೆಕ್ನೀಷಿಯನ್ ಸಿಬ್ಬಂದಿಗೆ ವಿತರಿಸಿದರು! ಏಕೆಂದರೆ ಅವರ ಪ್ರಕಾರ ಟೆಕ್ನೀಷಿಯನ್ ಕೆಲಸಗಾರರೇ ಚಲನಚಿತ್ರಗಳ ನಿಜವಾದ ನಾಯಕರು! ಕಿಯಾನೊ ಸ್ಟಂಟ್ ಡಬಲ್ಸ್ ಅನ್ನು ಅಷ್ಟೇನೂ ಬಳಸುತ್ತಿರಲಿಲ್ಲ ನಿರ್ದಿಷ್ಟ ಮತ್ತು ಅಪಾಯಕಾರಿ ಸಾಹಸಗಳಿಗೆ ಮಾತ್ರ ಬಳಸುತ್ತಿದ್ದನು. ಈ ಕಾರಣಕ್ಕಾಗಿ ಮುಂದೆ ಅವನು ತಮ್ಮ ಸ್ಟಂಟ್‌ಮೆನ್‌ಗಳ ಕೆಲಸವನ್ನು ಒಪ್ಪಿ ಪ್ರತಿಯೊಬ್ಬರಿಗೂ ದುಬಾರಿ ಬೆಲೆಯ ಹಾರ್ಲೆ ಡೇವಿಡ್‌ಸನ್ ಮೋಟಾರ್‌ಸೈಕಲ್ ಅನ್ನು ಉಡುಗೊರೆಯಾಗಿ ನೀಡಿದರು!

ಮತ್ತೊಂದು ವಿಶೇಷವೆಂದರೆ ಕಿಯಾನೊ ಮೆಟ್ರೋ ಮತ್ತು ಬಸ್‌ಗಳಂತಹ ಇತರ ಸಾರ್ವಜನಿಕ ಸಾರಿಗೆಯನ್ನು ನಿಯಮಿತವಾಗಿ ಬಳಸುತ್ತ ತನ್ನ ಸುತ್ತಲ ಜನರ ಜೀವನ ಅರಿಯುವ ಪ್ರಯತ್ನ ಮಾಡುತ್ತಾನೆ. ಕರಗದ ಸಿರಿವಂತಿಕೆಯಿದ್ದರು ಸಾರ್ವಜನಿಕರ ಜೊತೆ ಬೆರೆಯಲು ಸಂಕೋಚಪಡದ ಮೃದು ಮನಸ್ಸಿನವ ಕಿಯಾನೊ! ಹತ್ತು ಹಲವು ಆಸ್ಪತ್ರೆಗಳು ಆತನಿಂದ ಹತ್ತಾರು ಮಿಲಿಯನ್ ಡಾಲರ್ ಪಡೆದಿರುವುದಾಗಿ ವರದಿ ಮಾಡಿವೆ. ಅವನು ತನ್ನ ಚಿತ್ರದ ಗಳಿಕೆಯ ಶೇಕಡಾ ತೊಂಬತ್ತು ಭಾಗ ಕೆಲವು ಹೊಸ ಚಿತ್ರಗಳಿಗೆ ದೇಣಿಗೆ ನೀಡಿದರು. ಇದರಿಂದಾಗಿ ಚಿತ್ರ ನಿರ್ಮಾಣದಲ್ಲಿ ಇತರ ಹೊಸ ತಾರೆಯರನ್ನು ನೇಮಿಸಿಕೊಳ್ಳಲಿ ಅವರು ಬೆಳೆಯಲಿ ಎಂಬ ಉದಾರತೆಯಿಂದ!

ಕಿಯಾನೊ ಚಾರ್ಲ್ಸ್ ರೀವ್ಸ ಬೆಳೆದಂತೆ ಬದುಕಿನ ಯಶಸ್ಸೆಂದರೆ ಕೇವಲ ಜೀವನದಿ ಗೆಲುವಲ್ಲ ಹಣದ ಗಳಿಕೆಯಲ್ಲ ಮನೆ ಮಹಲುಗಳಲ್ಲ ಎಂದು ಅರಿತನು. ತನ್ನ ಸುತ್ತಲ ಜನರ ಸಂಕಷ್ಟಗಳಿಗೆ ಸ್ಪಂದಿಸುವುದು ಅವರ ಬದುಕಿನ ದುಃಖ ನಿವಾರಿಸುವುದು ನಿಜವಾದ ಯಶಸ್ಸು ಎಂದು ತಿಳಿದನು. ಅದರಂತೆಯೇ ಅಬಲರಿಗೆ ನೆರವಾಗಿ ಬಾಳಿದನು. ತನ್ನ ಜೀವನದ ನೂರು ಕಷ್ಟಗಳ ಎಲ್ಲಿಯೂ ಹೇಳದೆ ನಿರಾಶಾವಾದಿಯಾಗಿ ಕೊರಗದೆ ವಿಶಾಲ ದೃಷ್ಟಿಕೋನದಿಂದ ಜೀವನ ಅರ್ಥ ಮಾಡಿಕೊಂಡು ಪ್ರಪಂಚದ ಜೀವನದಲ್ಲಿ ಕೆಟ್ಟದ್ದನ್ನು ದೂರಮಾಡಿ ಒಳಿತನ್ನು ಮಾತ್ರವೇ ಸ್ವೀಕರಿಸಿ ಒಳಿತನ್ನೇ ಹಂಚುತ್ತಾ ಬದುಕಿದನು.



» ಡಾ.ಉಮೇಶ್ ಟಿ.ಪಿ.
ಸಾಹಿತಿಗಳು, ರಾಷ್ಟ್ರಪ್ರಶಸ್ತಿ ಪುರಸ್ಕೃತ ಶಿಕ್ಷಕರು ತುಪ್ಪದಹಳ್ಳಿ, ಹೊಳಲ್ಕೆರೆ

# ಮಕ್ಕಳು ಕಲಿಕೆಯಲ್ಲಿ ಹೆಚ್ಚು ಆಸಕ್ತಿ ವಹಿಸಿದರೆ ಭವಿಷ್ಯ ಉತ್ತಮವಾಗಿ ರೂಪಿಸಿಕೊಳ್ಳಲು ಸಾಧ್ಯ

» ಹೊಸದುರ್ಗ



ಮಕ್ಕಳು ಕಲಿಕೆಗೆ ಹೆಚ್ಚು ಆಸಕ್ತಿಯನ್ನು ವಹಿಸಿದರೆ ಭವಿಷ್ಯದ ದಿನಗಳನ್ನು ಉತ್ತಮವಾಗಿ ರೂಪಿಸಿಕೊಳ್ಳಲು ಸಹಕಾರಿಯಾಗಲಿದೆ ಆದಕಾರಣ ಏಕಾಗ್ರತೆಯಿಂದ ಓದಿದರೆ ಜಯ ಖಂಡಿತ ಸಿಗುತ್ತದೆ ಮಕ್ಕಳ ಮುಂದಿನ ಭವಿಷ್ಯ ಉಜ್ವಲವಾಗಲಿ ಎಂದು ತಾಲೂಕಿನ ಯೋಜನಾಧಿಕಾರಿ ಯವರಾದ ಚಂದ್ರಶೇ ಖರ್ ಶುಭ ಹಾರೈಸಿದರು ತಾಲೂಕಿನ ಮಾಡದಕೆರೆಯ ಶ್ರೀ ಮುರಳೀಧರ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ಕಳೆದ ಮೂರು ತಿಂಗಳಿಂದ ಉಚಿತ ಟ್ಯೂಷನ್ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಕಳೆದ ಮೂರು ತಿಂಗಳಿಂದ ಇಲ್ಲಿ ಉಚಿತ ಕ್ಲಾಸ್ ನಡೆಸುತ್ತಿದ್ದು ಮಕ್ಕಳಿಗೆ ಹೆಚ್ಚಿನ ಜ್ಞಾನವನ್ನು ರೂಪಿಸಲು ಹಾಗೂ ಉತ್ತಮ ಫಲಿತಾಂಶವನ್ನು ಹೆಚ್ಚಿಸಲು ಯೋಜನೆಯಿಂದ ಮಕ್ಕಳಿಗೆ ಟ್ಯೂಷನ್ ಕ್ಲಾಸನ್ನು ನಡೆಸಲಾಗುತ್ತಿತ್ತು ಎಂದರು. ಮುಖ್ಯೋಪಾಧ್ಯಾಯರಾದ ಜಯರಾಮ್ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳದ ಪೂಜ್ಯ ದಂಪತಿಗಳು ಸಮಾಜಮುಖಿ ಕೆಲಸವನ್ನು ನಡೆಸುತ್ತಿದ್ದು ಸರ್ವರಿಗೂ ಪ್ರಯೋಜನಕಾರಿಯಾಗಿದೆ ನಮ್ಮ ಶಾಲೆಗೆ ಟ್ಯೂಷನ್ ಕ್ಲಾಸ್ ಕಾರ್ಯಕ್ರಮವನ್ನು ಆಯೋಜಿಸಿದ್ದು ತುಂಬಾ ಪ್ರಯೋಜನಕಾರಿಯಾಗಿದೆ ಎಂದು ತಿಳಿಸಿದರು ವಿದ್ಯಾರ್ಥಿಗಳು ತಮ್ಮ ಅನಿಸಿಕೆಯನ್ನುಹೇಳಿದರು. ಅಧ್ಯಕ್ಷತೆಯನ್ನು ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಈರಣ್ಣ ವಹಿಸಿದ್ದರು. ಕಾರ್ಯಕ್ರಮದಲ್ಲಿ ಶಾಲೆ ಶಿಕ್ಷಕರಾದ ಶ್ರೀಮತಿ ಚೇತನ ಹರೀಶ್, ಪ್ರಹ್ಲಾದ್ ಉಪಸ್ಥಿತರಿದ್ದರು.

# ಉಚ್ಚಂಗಿಯಲ್ಲಮ್ಮ ಬಾಗಿಲ ಬಳಿಯ ಸ್ಮಾರಕ ಸ್ವಚ್ಛತೆ

» ಚಿತ್ರದುರ್ಗ

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಸರ್ಕಾರಿ ಕಲಾ ಕಾಲೇಜ್ ಸ್ವಾಯತ್ತ ಇತಿಹಾಸ ಪರಂಪರೆ ಕೂಟ ಮತ್ತು ಎನ್‌ಎಸ್‌ಎಸ್ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಚಿತ್ರದುರ್ಗ ನಗರದ ಐತಿಹಾಸಿಕ ಸ್ಮಾರಕವಾದ ಸಿಹಿ ನೀರು ಹೊಂಡದ ಪಕ್ಕದಲ್ಲಿರುವ ಉಚ್ಚಂಗಿಯಲ್ಲಮ್ಮ ಬಾಗಿಲ ಬಳಿಯಲ್ಲಿ ಸ್ಮಾರಕ ಸ್ವಚ್ಛತೆ ಕಾರ್ಯಕ್ರಮ ನಡೆಸಲಾಯಿತು.

ಈ ಕಾರ್ಯಕ್ರಮದಲ್ಲಿ ಪುರಾತತ್ವ ಇಲಾಖೆಯ ಸಹಾಯಕ ನಿರ್ದೇಶಕರಾದ ಪ್ರಹ್ಲಾದ ಜಿ ಮಾತನಾಡಿ ಚಿತ್ರದುರ್ಗ ಪಾಳೇಗಾರ ಅರಸರ ಕಾಲದಲ್ಲಿ ನಿರ್ಮಾಣವಾದ ಭವ್ಯವಾದ ಕೋಟೆಯ ಕೊನೆಯ ಸುತ್ತು ಹಾಗೂ ಈಗಿನ ಮೊದಲ ಸುತ್ತಿನ ಪ್ರಮುಖ ನಾಲ್ಕು ಬಾಗಿಲು ಈಗ ಉಳಿದುಕೊಂಡಿದ್ದು ಅವುಗಳನ್ನು ಸಂರಕ್ಷಿಸುವುದು ಜರೂರು ಅವಶ್ಯಕತೆ ಇದೆ ಕಾಲೇಜಿನ ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಂದ ಸ್ಮಾರಕಗಳ ಬಳಿಯಲ್ಲಿ ಹೆಚ್ಚು ಹೆಚ್ಚು ಸ್ವಚ್ಛತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರಿಂದ ಎಷ್ಟೋ ಸ್ಮಾರಕಗಳನ್ನು ಮರ-ಗಿಡ ಗಂಟೆಗಳಿಂದ ಹಾಳಾಗದಂತೆ ರಕ್ಷಿಸಬಹುದು ಎಂದು ತಿಳಿಸಿದರು




ಚಿತ್ರದುರ್ಗದ ಮದಕರಿ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷರಾದ ಗೋಪಾಲಸ್ವಾಮಿ ನಾಯಕ್‌ಮಾತನಾಡುತ್ತ ವಿದ್ಯಾರ್ಥಿಗಳು ಸ್ಥಳೀಯ ಇತಿಹಾಸ ಸ್ಮಾರಕ ಗಳ ಬಗ್ಗೆ ಹೆಚ್ಚು ತಿಳಿದುಕೊಳ್ಳುವುದರೊಂದಿಗೆ ಆಸಕ್ತಿ ವಹಿಸಬೇಕು ತಮ್ಮ ತಮ್ಮ ಊರುಗಳಲ್ಲಿರುವ ಶಿಲಾಶಾಸನ ಕೋಟೆ ಸ್ಮಾರಕಗಳನ್ನುಸಂರಕ್ಷಿಸಲು ಪುರಾತತ್ವ ಇಲಾಖೆಯ ಗಮನಕ್ಕೆ ತರಬೇಕು ಎಂದರು

ಕಾಲೇಜಿನ ಎನ್‌ಎಸ್‌ಎಸ್ ಘಟಕ ಅಧಿಕಾರಿಗಳಾದ ಪ್ರಸಾದ್ ಮಾತನಾಡಿ ಮುಂದಿನ ದಿನಗಳಲ್ಲಿ ಸ್ಮಾರಕಗಳ ಬಳಿಯಲ್ಲಿ ಎನ್‌ಎಸ್‌ಎಸ್‌ವತಿಯಿಂದ ಸ್ವಚ್ಛತೆ ಕಾರ್ಯಕ್ರಮವನ್ನು ಹಮ್ಮಿಕೊಂಡು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಲಾಗುವುದು ಎಂದರು

ಎನ್‌ಎಸ್‌ಎಸ್ ಘಟಕದ ವಿದ್ಯಾರ್ಥಿಗಳು ಸ್ಮಾರಕದ ಮೇಲೆ ಮತ್ತು ಒಳ ಆವರಣವನ್ನು ಸ್ವಚ್ಛಗೊಳಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T